ಸಂಪುಟ : 10 ಸಂಚಿಕೆ: 127 ಪುಟ : 4+2 ಬೆಲೆ: 3.00 ಶನಿವಾರ ಜೂನ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 127 Pages : 4+2 Price : 3.00 Saturday June 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕ್ರೀಡಾ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ Tenzing Norjy National Advennture Award (TNNAA) ಅರ್ಜಿಗಳನ್ನು ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದಿಂದ ಆಹ್ವಾನಿಸಲಾಗಿದೆ.

2022, 2023, 2024ನೇ ಸಾಲಿನಲ್ಲಿ ಜಲ ಸಾಹಸ, ವಾಯು ಸಾಹಸ ಮತ್ತು ಭೂ ಸಾಹಸ ಕ್ರೀಡೆಗಳಲ್ಲಿ ಸಾಧನೆ ಮಾಡಿರುವ ಕ್ರೀಡಾಪಟುಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಿದ್ದು, ಸದರಿ ಕ್ರೀಡಾಪಟುಗಳು ಅಲ್ಲಿ ತಿಳಿಸಿದ ಪೋರ್ಟಲ್ ನಲ್ಲಿ ಇರುವ ಮಾರ್ಗಸೂಚಿ http://awards.gov.in ಅನುಸಾರ ಅರ್ಜಿಗಳನ್ನು ಜೂನ್ 30 ರ ಒಳಗಾಗಿ ಆನ್ಲೈನ್ ಮೂಲಕ ಸಲ್ಲಿಸುವಂತೆ ಕೋರಲಾಗಿದೆ.

ಆನ್ಲೈನ್ ಅರ್ಜಿ ನಮೂನೆಯಲ್ಲಿ ಯಾವುದೇ ಸಮಸ್ಯೆಗಳು ಎದುರಾದರೆ ಅರ್ಜಿದಾರರು ಸಹಾಯಕ್ಕಾಗಿ ಟೋಲ್ ಫ್ರೀ ನಂಬರ್ 01123386898 ಅನ್ನು ಸಂಪರ್ಕಿಸಲು ಕೋರಲಾಗಿದೆ.

ಎಂದು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ಜನ-ಜಾನುವಾರುಗಳ ಸುರಕ್ಷತೆಗೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಸಾಕಷ್ಟು ಮಳೆಯಾಗುತ್ತಿದ್ದು, ಮಳೆಯಿಂದ ಹಾನಿಗೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಸ್ಥಳೀಯ ಅಧಿಕಾರಿಗಳು ಪ್ರಥಮ ಆದ್ಯತೆ ನೀಡಿ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಬೆಣ್ಣೆಹಳ್ಳ ಹಾಗೂ ನದಿಯ ಪ್ರವಾಹದಿಂದ ತೊಂದರೆಗೊಳಗಾಗುವ ಗ್ರಾಮಗಳ ಸುರಕ್ಷತೆ ಕುರಿತಂತೆ ಗಮನಹರಿಸಬೇಕು. ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಎಲ್ಲರೂ ಕೇಂದ್ರ ಸ್ಥಾನದಲ್ಲಿದ್ದು ಅತಿವೃಷ್ಟಿ, ಪ್ರವಾಹ ಪರಿಸ್ಥಿತಿ ಎದುರಾದಲ್ಲಿ ಸಮರ್ಪಕವಾಗಿ ಎದುರಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ಜನ-ಜಾನುವಾರುಗಳ ಜೀವ ಹಾನಿ ತಡೆಯುವುದರೊಂದಿಗೆ ಆಸ್ತಿ ರಕ್ಷಣೆ ಮಾಡಬೇಕೆಂದು ಹೇಳಿದರು.



ಅಪಾರ ಮಳೆಯಿಂದ ಬಿದ್ದ ಮಳೆ ನೀರು ಚರಂಡಿ ಹಾಗೂ ಪ್ರಮುಖ ಕಾಲುವೆಗಳ ಮೂಲಕ ಸರಾಗವಾಗಿ ಮುಂದೆ ಸಾಗುವಂತೆ ಇರುವ ಗಿಡ-ಗಂಟಿ, ಪ್ಲಾಸ್ಟಿಕ್ ತೆರವುಗೊಳಿಸಬೇಕು. ಇದರಿಂದ ಮಳೆ ನೀರು ಮನೆಗಳಿಗೆ ನುಗ್ಗುವುದನ್ನು ತಡೆಯಬಹುದಾಗಿದೆ. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ತಗ್ಗು ಪ್ರದೇಶಗಳಲ್ಲಿ ಹಾಗೂ ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಗಳಲ್ಲಿ ವಾಸಿಸುವವರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಹೇಳಿದರು.

ಉಪವಿಭಾಗಾಧಿಕಾರಿ ಗಂಗಪ್ಪ ಎಂ ಮಾತನಾಡಿ, ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಅಗತ್ಯ ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

> ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು. ಸಂದರ್ಭಾನುಸಾರ ಸಾರ್ವಜನಿಕರ ಸುರಕ್ಷತೆಗೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದ ಹಾನಿಯಾದ ಮನೆ, ಶಾಲೆ, ಬೆಳೆ ಹಾನಿ ವಿವರಗಳ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಶರಣಬಸಪ್ಪ ಪಲ್ಲೇದ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಎಸ್.ವಾಯ್.ಬಿ.ಎಂ.ಎಸ್ ಯೋಗ ಪಾಠಶಾಲೆ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರ ಸಹಯೋಗದಲ್ಲಿ ಜೂನ್ 21ರಂದು ಜಗದ್ಗುರು ತೋಂಟದಾರ್ಯ ಮಠದ ಶಿವಾನುಭವ ಮಂಟಪದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಸಂಜೆ 5-30 ಗಂಟೆಗೆ ಶರಣಬಸಪ್ಪ ಕಳಕಪ್ಪ ಪಲ್ಲೇದ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಯೋಗದ ಮಹತ್ವದ ಕುರಿತು ಯೋಗಾಚಾರ್ಯ ಕೆ.ಎಸ್. ಪಲ್ಲೇದ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡರ ಭಾಗವಹಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು. ಕಸಾಪ ಕಾರ್ಯದರ್ಶಿ ದತ್ತಪ್ರಸನ್ನ ಪಾಟೀಲ ಅವರಿಂದ ಕಳಕಪ್ಪ ಪಲ್ಲೇದರ ಸ್ಮರಣೆ ಜರುಗಲಿದೆ. ದತ್ತಿ ದಾನಿಗಳಾದ ಕೆ.ಎಸ್. ಪಲ್ಲೇದ ಉಪಸ್ಥಿತರಿರುವರು. ಇದೇ ಸಂದರ್ಭದಲ್ಲಿ ಯೋಗ ಸೇವಾಕರ್ತರಿಗೆ ಸನ್ಮಾನ ಹಾಗೂ ಯೋಗ ಶಿಬಿರದ ಸಮಾರೋಪ ಜರುಗಲಿದೆ. ಕಾರ್ಯಕ್ರಮದಲ್ಲಿ ಪರಿಷತ್ತಿನ ಎಲ್ಲ ಸದಸ್ಯರು, ಸಾಹಿತಿಗಳು, ಯೋಗಾಭಿಮಾನಿಗಳು ಭಾಗವಹಿಸಬೇಕೆಂದು ಜಿಲ್ಲಾ ಕಸಾಪ, ಎಸ್.ವಾಯ್.ಬಿ.ಎಂ.ಎಸ್ ಯೋಗ ಪಾಠಶಾಲೆ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಪದಾಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ತಾಲೂಕಾ ಮಟ್ಟದ ಗ್ಯಾರಂಟಿ ಸಮಿತಿ ಪದಾಧಿಕಾರಿಗಳ, ಪ್ರಗತಿ ಪರಿಶೀಲನಾ ಸಭೆ

## ಪರಸ್ಪರ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಬಡ ಜನರ ಜೀವನಮಟ್ಟ ಸುಧಾರಿಸಿದೆ. ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಲಕ್ಷ್ಮೇಶ್ವರ ತಾಲೂಕು ಮುಂಚೂಣಿಯಲ್ಲಿದ್ದು, ಶೇ.100ರಷ್ಟು ಪ್ರಗತಿ ಸಾಧಿಸುವಲ್ಲಿ ಇಲಾಖಾವಾರು ಅಧಿಕಾರಿಗಳು ಪರಸ್ಪರ ಸಹಕಾರ, ಸಮನ್ವಯತೆಯೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ತಿಳಿಸಿದರು.

ಅವರು ಶುಕ್ರವಾರ ತಾ.ಪಂ ಸಭಾಭವನದಲ್ಲಿ ನಡೆದ ಲಕ್ಷ್ಮೇಶ್ವರ ತಾಲೂಕಾ ಮಟ್ಟದ ಗ್ಯಾರಂಟಿ ಸಮಿತಿ ಪದಾಧಿಕಾರಿಗಳ ಮತ್ತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.




ಸದ್ಯಕ್ಕೆ ಪಡಿತರ ಕಾರ್ಡ್‌ನಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿಗೆ ಅವಕಾಶ ಕಲ್ಪಿಸಿದ್ದು, ಜನರು ಸದುಪಯೋಗಪಡಿಸಿಕೊಳ್ಳಬೇಕು. ನ್ಯಾಯ ಬೆಲೆ ಅಂಗಡಿಯಲ್ಲಿ ಕಡ್ಡಾಯವಾಗಿ ದಾಸ್ತಾನು ಫಲಕ ಹಾಕುವುದು, ತಿಂಗಳ ಕೊನೆಯವರೆಗೂ ವಿತರಣೆ ಮಾಡಿಸುವುದು, ನ್ಯಾಯ ಬೆಲೆ ಅಂಗಡಿಗಳಿಲ್ಲದ ಹಳ್ಳಿಗಳ ಜನರಿಗೆ ಪಡಿತರ ವಿತರಿಸುವ ಜವಾಬ್ದಾರಿಯುತ ಕಾರ್ಯ ನಿರ್ವಹಿಸಬೇಕು ಹಾಗೂ ಅಕ್ಕಿ ಅಕ್ರಮ ಮಾರಾಟ ತಡೆಯುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಹಾರ ಇಲಾಖೆಯ ಅಧಿಕಾರಿ ಜಗದೀಶ ಕುರುಬರ ಅವರಿಗೆ ತಿಳಿಸಿದರು.

ಶಕ್ತಿ ಯೋಜನೆಯ ಬಗ್ಗೆ ಮಾಹಿತಿ ನೀಡಿದ ಸಾರಿಗೆ ಇಲಾಖೆಯ ಅಧಿಕಾರಿ ಅಶೋಕ ಅಣ್ಣಿಗೇರಿ, ತಾಲೂಕಿನಲ್ಲಿ ಪ್ರತಿನಿತ್ಯ ಸರಾಸರಿ 68496 ಜನರು ಪ್ರಯಾಣಿಕರು ಸಂಚಾರ ಮಾಡುತ್ತಿದ್ದು, ಇದರಲ್ಲಿ ಶೇ.68ರಷ್ಟು ಶಕ್ತಿ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಪ್ರತಿ ತಿಂಗಳು 4 ಕೋಟಿಗೂ ಹೆಚ್ಚು ಆದಾಯ ಬರುತ್ತಿದೆ ಎಂದು ಮಾಹಿತಿ ನೀಡಿದರಲ್ಲದೆ, ಉತ್ತಮ ಆದಾಯ ಬರುವುದರಿಂದ ಹೊಸ ಬಸ್ಸುಗಳು, ಹೆಚ್ಚಿನ ಸಾರಿಗೆ ವ್ಯವಸ್ಥೆ, ಬಸ್ಸುಗಳ ದುರಸ್ಥಿ, ಬಸ್ ನಿಲ್ದಾಣದಲ್ಲಿ ಶೌಚಾಲಯ, ಸ್ವಚ್ಛತೆ ಕಾಪಾಡುವ ಕೆಲಸವಾಗಬೇಕು ಎಂದು ಸಮಿತಿ ಸದಸ್ಯ ಶಿವರಾಜಗೌಡ ಪಾಟೀಲ ಹೇಳಿದರು.

ಅಂಗನವಾಡಿಗಳಲ್ಲಿ ಮಕ್ಕಳಿಗೆ ಮೊಟ್ಟೆ ಸೇರಿ ಸರಿಯಾದ ಆಹಾರ ಪೂರೈಕೆಯಾಗಬೇಕು. ಗೃಹಲಕ್ಷ್ಮೀ ಯೋಜನೆ ಎಲ್ಲ ಅರ್ಹರಿಗೂ ತಲುಪಬೇಕು ಎಂದು ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ ಅವರಿಗೆ ಮಡಿವಾಳರ ತಿಳಿಸಿದರು.

ಈ ವೇಳೆ ಹೆಸ್ಕಾಂ ಇಲಾಖೆ ಅಧಿಕಾರಿ ಮಹಾಂತೇಶ ಇಟಗಿ, ಉದ್ಯೋಗ ವಿನಿಮಯ ಕಚೇರಿಯ ಆನಂದ ಹೊಂಬಾಳೆ ಅವರಿಂದ ಪ್ರಗತಿ ವರದಿ ಪಡೆದು ಸಲಹೆ-ಸೂಚನೆ ನೀಡಿದರು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಪಂಚ ಗ್ಯಾರಂಟಿ ಯೋಜನೆ ಸೌಲಭ್ಯದಿಂದ ಅರ್ಹರು ವಂಚಿತರಾಗಬಾರದು. ಈ ನಿಟ್ಟಿನಲ್ಲಿ ಸಮಿತಿಯ ಸದಸ್ಯರ ಸಹಕಾರ, ಸಲಹೆ ಜೊತೆಗೆ ಪರಸ್ಪರ ಸಮನ್ವಯತೆಯಿಂದ ಕಾರ್ಯ ನಿರ್ವಹಿಸೋಣ ಎಂದರು.

ಈ ವೇಳೆ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಆರ್.ಆರ್. ನಧಾಫ್, ಕೆ.ಎನ್. ರಿತ್ತಿ, ಕಲ್ಲಪ್ಪ ಗಂಗಣ್ಣವರ, ರಮೇಶ ಬಾರಕೇರ, ಶಶಿಕಲಾ ಬಡಿಗೇರ, ಕಾರ್ತಿಕ ದೊಡ್ಡಮನಿ ಸೇರಿ ಫಲಾನುಭವಿಗಳು ಪಾಲ್ಗೊಂಡಿದ್ದರು.

> ತಾಲೂಕಿನಲ್ಲಿ ಅನ್ನಭಾಗ್ಯ ಯೋಜನೆಯ ಸೌಲಭ್ಯವನ್ನು ಶೇ.98ರಷ್ಟು ಫಲಾನುಭವಿಗಳು ಪಡೆಯುತ್ತಿದ್ದಾರೆ. ಒಂದಷ್ಟು ಫಲಾನುಭವಿಗಳಿಗೆ ಅವಶ್ಯಕತೆಗಿಂತ ಹೆಚ್ಚಿನ ಅಕ್ಕಿ ಲಭಿಸುವದರಿಂದ ಕಾಳಸಂತೆಯಲ್ಲಿ ಅಕ್ಕಿ ಮಾರಾಟಕ್ಕೆ ಅವಕಾಶ ಕಲ್ಪಿಸಿದಂತಾಗುತ್ತಿದೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ ಅಕ್ಕಿ ಪ್ರಮಾಣ ಕಡಿಮೆ ಮಾಡಿ ಇತರೇ ಅಗತ್ಯ ಆಹಾರ ಧಾನ್ಯ ವಿತರಿಸುವ ಬಗ್ಗೆ ತಾಲೂಕಾ ಮಟ್ಟದ ಸಮಿತಿಯಿಂದ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ನಾಗರಾಜ ಮಡಿವಾಳರ ತಿಳಿಸಿದರು.

## ಪೊಲೀಸ್ ಠಾಣೆಗೆ ಬರಲು ಭಯ ಬೇಡ




■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿನಿಯರು ಸಮಾಜದಲ್ಲಿ ಧೈರ್ಯದಿಂದ ಬದುಕಬೇಕು. ಪೊಲೀಸ್ ಠಾಣೆಗೆ ಬರಲು ಯಾವುದೇ ಭಯ ಬೇಡ. ಸಮಾಜದಲ್ಲಿ ಯಾವುದೇ ಅಹಿತಕರ ಘಟನೆ ನಡೆದರೂ ಕೂಡಲೇ 112ಗೆ ಕರೆ ಮಾಡಬೇಕು. ಇಲ್ಲದಿದ್ದರೆ ಹತ್ತಿರದಲ್ಲಿರುವ ಪೊಲೀಸ್ ಠಾಣೆಗೆ ಬಂದು ಮಾಹಿತಿ ನೀಡಬೇಕು ಎಂದು ಪಿ.ಎಸ್.ಐ ಆರ್.ಆರ್. ಮುಂಡವಾಡಗಿ ಹೇಳಿದರು.

ನಗರದ ಶಹರ ಪೊಲೀಸ್ ಠಾಣೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ 'ತೆರೆದ ಮನೆ' ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಬಸ್ ನಿಲ್ದಾಣಗಳಲ್ಲಿ ಪ್ರತಿದಿನ ಏನಾದರೊಂದು ಅಹಿತಕರ ಘಟನೆಗಳು ನಡೆಯುತ್ತಿರುತ್ತವೆ. ಹೆಚ್ಚು ಕಳ್ಳತನ ಪ್ರಕರಣಗಳು ಬೆಳಕಿಗೆ ಬರುತ್ತಿವೆ. ಇಂತಹ ಘಟನೆ ಕಂಡಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ರವಾನಿಸಬೇಕು. ಮನೆ ಬಿಟ್ಟು ಸಂಬಂಧಿಕರ ಊರಿಗೆ ತೆರಳುವ ಮುನ್ನ ಠಾಣೆಗೆ ಮಾಹಿತಿ ನೀಡಿ ಹೋಗುವ ಅವಶ್ಯಕತೆ ಇದ್ದು, ಇದರಿಂದ ಕಳ್ಳತನ ಪ್ರಕರಣ ತಪ್ಪಿಸಲು ಸಹಾಯವಾಗುತ್ತದೆ ಎಂದರು.

ವಾಟ್ಸ್‌ಆಪ್‌ನಲ್ಲಿ ಸ್ಟೇಟಸ್ ಇಡುವುದು ಇತ್ತೀಚೆಗೆ ಟ್ರೆಂಡ್ ಆಗಿದೆ. ದೂರದ ಊರಿಗೆ ಸಂಚರಿಸುವಾಗ ಸ್ಟೇಟಸ್‌ನಲ್ಲಿ ಮಾಹಿತಿಯನ್ನು ಹಾಕಬಾರದು. ಇದರಿಂದ ಕಳ್ಳತನ ಮಾಡಲು ಅನುಕೂಲ ಆಗುತ್ತೆ. ಹಾಗೂ ವಾಟ್ಸ್‌ಆಪ್ ಡಿಪಿಗೆ ಫೋಟೊ ಹಾಕಬಾರದು. ಅದೇ ಫೋಟೊ ಬಳಸಿಕೊಂಡು ಎಡಿಟ್ ಮಾಡಿ ಬ್ಲ್ಯಾಕ್‌ಮೇಲ್ ಮಾಡುವಂತಹ ಸಾಧ್ಯತೆ ಇರುತ್ತದೆ ಎಂದು ಕಿವಿಮಾತು ಹೇಳಿದರು.

ನಿಮ್ಮ ಮೊಬೈಲ್‌ಗೆ ಅನುಮಾನಾಸ್ಪದ ಕರೆಗಳು ಬರಬಹುದು. ಬ್ಯಾಂಕ್ ಸಿಬ್ಬಂದಿ ಎಂದು ಕರೆ ಮಾಡಬಹುದು. ಅಂತಹ ಕರೆಗಳನ್ನು ಸ್ವೀಕರಿಸಬೇಡಿ. ಬ್ಯಾಂಕ್‌ನಿಂದ ಹಣ ಪಡೆದು ಮರಳುವಾಗ ಕಳ್ಳರ ಬಗ್ಗೆ ಗಮನವಿರಬೇಕು. ವಯಸ್ಸಾದ ಕೆಲವರಿಗೆ ಹಾಗೂ ಅನಕ್ಷರಸ್ಥರಿಗೆ ಬ್ಯಾಂಕ್‌ನಲ್ಲಿ ವ್ಯವಹರಿಸುವ ಜ್ಞಾನ ಇರುವುದಿಲ್ಲ. ಅಂತಹ ಸಮಯದಲ್ಲಿ ಅವರ ಸಹಾಯಕ್ಕೆ ನಿವು ಧಾವಿಸಬೇಕು ಎಂದು ಆರ್. ಆರ್. ಮುಂಡವಾಡಗಿ ಹೇಳಿದರು.

## ಸಮೀಕ್ಷೆ ಆ್ಯಪ್‌ನಲ್ಲಿ ಬೆಳೆಗಳನ್ನು ದಾಖಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್‌ನಿಂದ ಮುಂಗಾರು ರೈತರ ಬೆಳೆ ಸಮೀಕ್ಷೆ 2025ನ್ನು Download ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ.

ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುವದರಿಂದ ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ.

ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ವಿವರಗಳನ್ನು ದಾಖಲಿಸಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ತಾರಾಮಣಿ ಜಿ.ಹೆಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಹಾಗೂ 18004253553 ಗೆ ಕರೆ ಮಾಡಲು ಕೋರಿದೆ.

## ನಿರ್ವಹಣಾ ಕಾರ್ಯ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜೂನ್ 21ರಂದು ಸಂಭಾಪೂರ ರಸ್ತೆ ಗದಗ 110 ಕೆವ್ಹಿ ವಿದ್ಯುತ್ ಉಪಕೇಂದ್ರದಲ್ಲಿ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ಕೈಗೊಳ್ಳಲು ಉದ್ದೇಶಿಸಲಾಗಿದ್ದ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಸಿಪಿಸಿ 1ರಲ್ಲಿ ತಿದ್ದುಪಡಿ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನ್ಯಾಯಾಂಗದ ವ್ಯವಸ್ಥೆಯಲ್ಲಿ ಬಡವರಿಗೆ ಸಬಲತೆ ನೀಡುವಲ್ಲಿ ಸಿವಿಲ್ ಪ್ರಕಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ಕಾಯ್ದೆ ದಿಟ್ಟ ಹೆಜ್ಜೆಯಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್ ಪಾಟೀಲ ಸ್ಕೂಲ್ ಆಫ್ ಲಾ ಕಾಲೇಜಿನಲ್ಲಿ ನಡೆದ ಸಿವಿಲ್ ಪ್ರಕಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ಕಾಯ್ದೆ ಕುರಿತ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಸುಮಾರು ವರ್ಷಗಳಿಂದ ಬಾಕಿ ಉಳಿದಿರುವ ವ್ಯಾಜ್ಯಗಳಿಂದ ನ್ಯಾಯಾಂಗ ವ್ಯವಸ್ಥೆ ಟೀಕೆಗೆ ಒಳಗಾಗಿದ್ದರೂ, ವಾಜ್ಯಗಳ ನಿಕಾಲೆ ಮಾಡುವ ಭಾವನೆ ಯಾರಲ್ಲೂ ಬರಲಿಲ್ಲ. ಆದರೆ ನಮ್ಮ ಸರ್ಕಾರದ ಮಹತ್ವದ ನಿರ್ಧಾರದಿಂದ ಬಡವರಿಗೆ ಶೀಘ್ರವಾಗಿ ನ್ಯಾಯ ಸಿಗಲಿದೆ ಎಂದರು.

ಸಕಾಲದಲ್ಲಿ ನ್ಯಾಯದಾನ ಮಾಡದೇ ತಡ ಮಾಡುವುದು ದ್ರೋಹ ಬಗೆಯುವುದಕ್ಕೆ ಸಮ ಎಂಬ ಮಾತಿದೆ. ಇದನ್ನು ಹೋಗಲಾಡಿಸಲು ಕಾಯ್ದೆಯ ಮೂಲಕ 2 ವರ್ಷದಲ್ಲಿ ಕೇಸ್ ನಿಕಾಲೆ ಆಗಲು ಸಿಪಿಸಿ 1ರಲ್ಲಿ ತಿದ್ದುಪಡಿ ಮಾಡಿದ್ದೇವೆ. ಸೆಕ್ಷನ್ 89ರಲ್ಲಿ ತಿದ್ದುಪಡಿ ಮೂಲಕ ರಾಜಿ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

> ಬಡವರಿಗೆ ಶ್ರೀಘ್ರಗತಿಯಲ್ಲಿ ನ್ಯಾಯ ಒದಗಿಸಲು ಮತ್ತು ನ್ಯಾಯಾಲಯದ ಸಮಯಾವಕಾಶವನ್ನು ಉಳಿಸಿಲು ಈ ಕಾಯ್ದೆ ನೆರವಾಗಲಿದೆ.
>
> - ನ್ಯಾ.ಮೂ ಅಶೋಕ್ ಬಿ.ಇಂಚಗೇರಿ.

## ಸಂಪಾದಕೀಯ

# ಬಿಜೆಪಿಯಲ್ಲಿ ಒಗ್ಗಟ್ಟಿನ ಮಂತ್ರ

ಕರ್ನಾಟಕದ ಬಿಜೆಪಿಯೊಳಗೆ ನಡೆಯುತ್ತಿರುವ ಆಂತರಿಕ ಭಿನ್ನಮತವು ಇತ್ತೀಚೆಗೆ ತೀವ್ರ ಸ್ವರೂಪ ಪಡೆದಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಮರು ನೇಮಕದ ನಂತರ ಭಿನ್ನಮತೀಯರ ಅಸಮಾಧಾನ ಬಹಿರಂಗವಾಗಿ ಸ್ಫೋಟಗೊಂಡಿತ್ತು. ಇಂತಹ ಸೂಕ್ಷ್ಮ ಪರಿಸ್ಥಿತಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ರಾಜ್ಯ ಭೇಟಿ ಮಹತ್ವದ ಬೆಳವಣಿಗೆಗಳಿಗೆ ಕಾರಣವಾಗಿದೆ.

ಅಮಿತ್ ಶಾ ಆಗಮನದ ಬೆನ್ನಲ್ಲೇ, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್ ಅವರ ನಿವಾಸದಲ್ಲಿ ಬಂಡಾಯ ನಾಯಕರು ಸಭೆ ಸೇರಿದ್ದು, ಜಿ.ಎಂ. ಸಿದ್ದೇಶ್ವರ್, ಬಿ.ಪಿ. ಹರೀಶ್, ಕುಮಾರ್ ಬಂಗಾರಪ್ಪ, ರಮೇಶ್ ಜಾರಕಿಹೊಳಿ ಸೇರಿದಂತೆ ಹಲವು ಪ್ರಮುಖರು ಚರ್ಚೆ ನಡೆಸಿದ್ದಾರೆ ಎಂಬ ಮಾತುಗಳು ಕೇಳಿ ಬಂದಿವೆ. ಇದು ರಾಜ್ಯ ಬಿಜೆಪಿಯಲ್ಲಿ ಆಂತರಿಕ ಬಿಕ್ಕಟ್ಟು ಎಷ್ಟು ಆಳವಾಗಿ ಬೇರೂರಿದೆ ಎಂಬುದಕ್ಕೆ ಕನ್ನಡಿ ಹಿಡಿದಿದೆ.

ಈ ಎಲ್ಲ ಬೆಳವಣಿಗೆಗಳ ನಡುವೆ, ಅಮಿತ್ ಶಾ ಅವರು ರಾಜ್ಯ ಬಿಜೆಪಿ ನಾಯಕರೊಂದಿಗೆ ನಡೆಸಿದ ಚರ್ಚೆಗಳು ನಿರ್ಣಾಯಕವೆಂದು ಪರಿಗಣಿಸಲಾಗಿದೆ. ಅವರು ರಾಜ್ಯ ನಾಯಕರಿಗೆ ಒಗ್ಗಟ್ಟಿನ ಮಂತ್ರ ಜಪಿಸುವಂತೆ ಖಡಕ್ ಸೂಚನೆ ನೀಡಿದ್ದಾರೆ. ಇದು ಪಕ್ಷದೊಳಗೆ ಶಿಸ್ತು ಮತ್ತು ಒಗ್ಗಟ್ಟನ್ನು ಮರುಸ್ಥಾಪಿಸುವ ಕೇಂದ್ರ ನಾಯಕತ್ವದ ಪ್ರಯತ್ನವನ್ನು ತೋರಿಸುತ್ತದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, "ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ನಮ್ಮ ಹೋರಾಟವನ್ನು ದ್ವಿಗುಣಗೊಳಿಸಬೇಕು" ಎಂದು ಅಮಿತ್ ಶಾ ಅವರು ಸಲಹೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತು ಅರವಿಂದ ಬೆಲ್ಲದ್ ಅವರು ಅಮಿತ್ ಶಾ ಅವರನ್ನು ಭೇಟಿ ಮಾಡಿ ರಾಜ್ಯ ರಾಜಕಾರಣದ ಪ್ರಸ್ತುತ ಬೆಳವಣಿಗೆಗಳ ಕುರಿತು ಚರ್ಚಿಸಿರುವುದು ಕುತೂಹಲ ಮೂಡಿಸಿದೆ.

ಅಮಿತ್ ಶಾ ಅವರ ಈ ಭೇಟಿ ರಾಜ್ಯ ಬಿಜೆಪಿಯಲ್ಲಿನ ಭಿನ್ನಮತವನ್ನು ಶಮನಗೊಳಿಸಿ, ಪಕ್ಷವನ್ನು ಮುಂಬರುವ ಸವಾಲುಗಳಿಗೆ ಸಿದ್ಧಪಡಿಸುವ ನಿಟ್ಟಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ. ಆದರೆ ರಾಜ್ಯ ನಾಯಕರು ಶಾ ಸೂಚನೆಯನ್ನು ಎಷ್ಟರಮಟ್ಟಿಗೆ ಪಾಲಿಸುತ್ತಾರೆ ಎನ್ನುವುದು ಇನ್ನೂ ಯಕ್ಷ ಪ್ರಶ್ನೆಯಾಗಿದೆ.

### ಜೂನ್ 21, ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ವಿಶೇಷ ಲೇಖನ

# ಯೋಗ ಮಾಡು, ನಿರೋಗಿಯಾಗು



ಜಗತ್ತಿಗೆ ಭಾರತ ದೇಶವು ನೀಡಿದ ಅತ್ಯದ್ಭುತ ಕೊಡುಗೆಯೆಂದರೆ 'ಯೋಗ'ವಾಗಿದೆ. ಯೋಗವು ಪ್ರಾಚೀನ ಭಾರತೀಯ ತತ್ವ ಶಾಸ್ತ್ರವಾಗಿದ್ದು, ಸಾವಿರಾರು ವರ್ಷಗಳ ಇತಿಹಾಸ ಹೊಂದಿದೆ. ಯೋಗವು ಮನುಷ್ಯನ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯದ ಸರಳ ಸೂತ್ರವಾಗಿದೆ. ಇಡೀ ಮನುಷ್ಯ ಜನಾಂಗದ ಏಳಿಗೆಗೆ, ಸಂತೋಷಕ್ಕೆ, ನೆಮ್ಮದಿಗೆ ತೃಪ್ತಿಗೆ ಬೇಕಾಗುವ ಬಹುದೊಡ್ಡ ಸಾಧನವೇ ಯೋಗವಿದ್ಯೆಯಾಗಿದೆ. ಭಾರತ ದೇಶ ಅಷ್ಟೇ ಅಲ್ಲದೇ ಇನ್ನೂ ಹಲವಾರು ದೇಶಗಳಲ್ಲಿ ಯೋಗವು ತನ್ನ ಛಾಪನ್ನು ಮೂಡಿಸಿದೆ.

ಯೋಗ ಸೂತ್ರಗಳನ್ನು ರಚಿಸಿದ ಪತಂಜಲಿ ಮಹರ್ಷಿಗಳನ್ನು ಯೋಗದ ಪಿತಾಮಹ ಎಂದು ಪರಿಗಣಿಸಲಾಗುತ್ತದೆ.

**ಯೋಗೇನಚಿತ್ತಸ್ಯ ಪದೇವವಾಚಾಂ**
**ಮಲಂ ಶರೀರಸ್ಯ ಚ ವೈದ್ಯಕೇನಾಂ**
**ಯೋಪಾಕರೋತ್ತಂ ಪ್ರವರಂ**
**ಮುನೀನಾಂ ಪತಂಜಲಿ ಪ್ರಾಂಜಲಿಂ**
**ರಾನತೋಸ್ಮಿನ್**

ಯೋಗದಿಂದ ಮನಸ್ಸಿನ ಕಲ್ಮಶಗಳನ್ನು, ಪದಗಳಿಂದ ಭಾಷೆಯ ದೋಷಗಳನ್ನು ಮತ್ತು ವೈದ್ಯಕೀಯದಿಂದ ಶರೀರದ ದೋಷಗಳನ್ನು ನಿವಾರಿಸಿದ ಶ್ರೇಷ್ಠ ಮುನಿ ಪತಂಜಲಿಯವರಿಗೆ ನನ್ನ ನಮಸ್ಕಾರಗಳು ಎಂದು ಪತಂಜಲಿ ಮಹರ್ಷಿಗಳಿಗೆ ಹೀಗೆ ಕೃತಜ್ಞತೆ ಸಲ್ಲಿಸಲಾಗುತ್ತದೆ.

'ಯೋಗ' ಎಂಬ ಶಬ್ದವು ಸಂಸ್ಕೃತ ಬಾಷೆಯ 'ಯುಜ್' ಎಂಬ ಪದದಿಂದ ಆಗಿದೆ. ಯೋಗವೆಂದರೆ ಜೋಡಿಸು, ಸೇರಿಸು, ಕೂಡಿಸು ಎಂಬ ಅರ್ಥ ಬರುತ್ತದೆ. ಆಧ್ಯಾತ್ಮಿಕ, ಮಾನಸಿಕ ಮತ್ತು ದೈಹಿಕ ಶಾಂತಿ-ಸಂಯಮಗಳನ್ನು ಕಾಯ್ದುಕೊಳ್ಳಲು ಸಾಧಿಸಲಾಗುವ ಉನ್ನತ ಜೀವನ ಶಿಕ್ಷಣವೇ ಯೋಗವಾಗಿದೆ. ಯೋಗದಲ್ಲಿ ದೇಹದ ಜೊತೆ ಮನಸ್ಸು, ಬುದ್ಧಿ, ಭಾವನೆ ಹಾಗೂ ಆತ್ಮವನ್ನು ಕೂಡಿಸುವುದನ್ನು ಅಭ್ಯಾಸ ಮಾಡಲಾಗುತ್ತದೆ.

ಯೋಗವು ವ್ಯಕ್ತಿಯಲ್ಲಿನ ಶಕ್ತಿಯನ್ನು ವೃದ್ಧಿಪಡಿಸಲು ಒಂದು ವಿಧಾನವಾಗಿದೆ. ಅದು ಸಂಪೂರ್ಣ ಸ್ವ ಸಾಫಲ್ಯ ಪಡೆಯುವ ಒಂದು ಹಾದಿಯನ್ನು ಒದಗಿಸುತ್ತದೆ. ಮಾನವನ ಪ್ರಜ್ಞೆಯ ಆತ್ಮಶಕ್ತಿಯ ಅಭಿವೃದ್ಧಿಯಲ್ಲಿ ಯೋಗವು ವಿಕಾಸವಾಗುತ್ತಿರುವ ಪ್ರಕ್ರಿಯೆಯಾಗಿದೆ.

ಯೋಗದ ದೃಷ್ಟಿಯಲ್ಲಿ ದೇಹವು ಐದು ಕೋಶಗಳನ್ನು ಒಳಗೊಂಡಿದೆ. ಈ ಐದು ಕೋಶಗಳು ಅನ್ನಮಯ ಕೋಶ, ಪ್ರಾಣಮಯ ಕೋಶ, ಮನೋಮಯ ಕೋಶ, ವಿಜ್ಞಾನಮಯ ಕೋಶ ಮತ್ತು ಆನಂದಮಯ ಕೋಶ. ಜಪ ಯೋಗ, ಕರ್ಮ ಯೋಗ, ಜ್ಞಾನ ಯೋಗ, ಭಕ್ತಿ ಯೋಗ, ರಾಜ ಯೋಗ ಎಂಬ ವಿಭಾಗಗಳೂ ಇವೆ.

**ಜಪ ಯೋಗ:** ವ್ಯಕ್ತಿಯ ಮನಸ್ಸನ್ನು ನೆನಪಿನಿಂದ ಅಥವಾ ಪುನರುಕ್ತಿಯ ಮೂಲಕ ದೇವರ ನಾಮಗಳನ್ನು ಮತ್ತು ಮಂತ್ರಗಳನ್ನು ಕೇಂದ್ರೀಕರಿಸುವುದು.

**ಕರ್ಮಯೋಗ:** ತಾವು ಮಾಡುವ ಕರ್ಮದ ಫಲಾಪೇಕ್ಷೆಯಿಲ್ಲದೇ ಕೆಲಸ ಮಾಡುವುದನ್ನು ಕಲಿಸುತ್ತದೆ. ಈ ಸಾಧನೆಯಲ್ಲಿ ಯೋಗಿಯು ತನ್ನ ಕರ್ತವ್ಯವನ್ನು ದೈವಿಕವೆಂದು ಪರಿಗಣಿಸುತ್ತಾನೆ. ತುಂಬು ಹೃದಯದ ಮನೋಭಾವದೊಂದಿಗೆ ನಡೆಸುತ್ತಾನೆ.

**ಜ್ಞಾನ ಯೋಗ:** ಧ್ಯಾನದ ಮೂಲಕ ಆಧ್ಯಾತ್ಮಿಕ ವ್ಯಕ್ತಿತ್ವವನ್ನು ಅರಿತುಕೊಳ್ಳುವುದು. ವೇದಪುರಾಣಗಳ ಅಧ್ಯಯನ.

**ಭಕ್ತಿ ಯೋಗ:** ದೈವಿಕ ಶಕ್ತಿಗೆ ತನ್ನನ್ನು ತಾನು ಸಮರ್ಪಿಸಿಕೊಳ್ಳುವುದು.

**ರಾಜ ಯೋಗ:** ಅಷ್ಟಾಂಗ ಯೋಗವೆಂದೇ ಪ್ರಸಿದ್ಧಿ ಬಂದಿರುವ ರಾಜ ಯೋಗವು ಮಾನವ ಜೀವಿಯ ಸರ್ವತೋಮುಖ ಅಭಿವೃದ್ಧಿಗಾಗಿಯೇ ಇದೆ. ಇವುಗಳೆಂದರೆ ಯಮ, ನಿಯಾಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ, ಧಾರಣ, ಧ್ಯಾನ, ಸಮಾಧಿ.

**ಯಮ:** ಯಮಗಳು ನೈತಿಕ ಸಂಹಿತೆಯ ನಿಯಮಗಳಾಗಿವೆ. ಇವು ಅಹಿಂಸೆ, ಸತ್ಯ, ಆಸ್ತೇಯ (ಕಳ್ಳತನ ಮಾಡದಿರುವುದು), ಬ್ರಹ್ಮಚರ್ಯ, ಅಪರಿಗ್ರಹ (ದುರಾಸೆಯಿಲ್ಲದಿರುವುದು) ಒಳಗೊಂಡಿವೆ.

**ನಿಯಮ:** ನಿಯಮಗಳು ವೈಯಕ್ತಿಕ ನಡುವಳಿಕೆಯ ನಿಯಮಗಳಾಗಿವೆ. ಇವು ಶುದ್ಧತೆ, ಸಂತೋಷ, ತಪಸ್ಸು, ಆಧ್ಯಾತ್ಮಿಕ ಅಧ್ಯಯನ, ಪ್ರಣಿಧಾನ (ದೇವರ ಮೇಲಿನ ನಿರಂತರ ಭಕ್ತಿ) ಒಳಗೊಂಡಿವೆ.

**ಆಸನ:** ಆಸನವು ಯೋಗ ಭಂಗಿಗಳನ್ನು ಸೂಚಿಸುತ್ತದೆ. ಇದು ದೇಹವನ್ನು ಧ್ಯಾನಕ್ಕೆ ಸ್ಥಿರವಾಗಿಸಲು ಕುಳಿತುಕೊಳ್ಳಲು ಸಹಾಯ ಮಾಡುತ್ತದೆ.

**ಪ್ರಾಣಾಯಾಮ:** ಪ್ರಾಣಾಯಾಮವು ಉಸಿರಾಟದ ಮೂಲಕ ಶಕ್ತಿಯ ನಿಯಂತ್ರಣ, ಶಕ್ತಿಯ ವಿಸ್ತರಣೆ ಮತ್ತು ಉಸಿರಾಟದ ವಿಸ್ತರಣೆಯನ್ನು ಸೂಚಿಸುತ್ತದೆ.

**ಪ್ರತ್ಯಾಹಾರ:** ಇದು ನಮ್ಮ ಇಂದ್ರಿಯಗಳ ಮೇಲೆ ನಿಯಂತ್ರಣ ಸಾಧಿಸುವುದಾಗಿದೆ. ಇದು ಇಂದ್ರಿಯಗಳನ್ನು ಬಾಹ್ಯದಿಂದ ಆಂತರಿಕ ಹರಿವಿಗೆ ಮರುನಿರ್ದೇಶಿಸುವುದನ್ನು ಒಳಗೊಂಡಿರುತ್ತದೆ.

**ಧಾರಣ:** ಇದು ದೃಢತೆ, ತಾಳ್ಮೆ ಮತ್ತು ಜ್ಞಾಪಕ ಶಕ್ತಿಯನ್ನು ಸೂಚಿಸುತ್ತದೆ.

ಧ್ಯಾನ: ಇದು ವ್ಯಕ್ತಿಯ ಮನಸ್ಸಿನ ತರಬೇತಿ ಅಥವಾ ಅರಿವಿನ ಒಂದು ಕ್ರಮವನ್ನುಂಟುಮಾಡುವ ಆಚರಣೆ ಸೂಚಿಸುತ್ತದೆ. ಸಮಾಧಿ ಎಂದರೆ ದೈವಿಕತೆಯೊಂದಿಗೆ ವಿಲೀನವಾಗುವುದು ಆಗಿದೆ.

ದೈಹಿಕ, ಮಾನಸಿಕ, ಸಾಮಾಜಿಕ ಮತ್ತು ಆಧ್ಯಾತ್ಮಿಕ ಆರೋಗ್ಯ ಒಳಗೊಂಡಿರುವ ಅಭ್ಯಾಸದ ವಿಧಾನವೆಂದರೆ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳುವುದಾಗಿದೆ. ಯೋಗವು ನಮ್ಮ ದೇಹ ಹಾಗೂ ಮನಸ್ಸಿಗೆ ಸಂತೋಷ, ಶಕ್ತಿಯನ್ನು ನೀಡುತ್ತದೆ.

ಪ್ರತಿದಿನ ಯೋಗ ಮಾಡುವುದರಿಂದ ದೇಹ ಮತ್ತು ಮನಸ್ಸಿಗೆ ವಿಶ್ರಾಂತಿ ನೀಡಲು ಸಹಾಯ ಮಾಡುತ್ತದೆ. ದೀರ್ಘಕಾಲದ ಒತ್ತಡದ ದೈಹಿಕ ಲಕ್ಷಣಗಳನ್ನು ಕಡಿಮೆ ಮಾಡಲು ಸಹಕಾರಿಯಾಗುತ್ತದೆ. ಯೋಗವು ಶಕ್ತಿ ಮತ್ತು ಚಲನೆಯ ವ್ಯಾಪ್ತಿಯನ್ನು ಹೆಚ್ಚಿಸುತ್ತದೆ. ನಿದ್ರಾಹೀನತೆಯಿಂದ ಬಳಲುತ್ತಿರುವವರು ರಾತ್ರಿ ಉತ್ತಮ ನಿದ್ರೆ ಮಾಡಬಹುದು. ಆತಂಕ ಮತ್ತು ಖಿನ್ನತೆ ನಿವಾರಣೆ ಮಾಡುತ್ತದೆ. ನಿಯಮಿತವಾದ ಯೋಗಾಭ್ಯಾಸ ತೂಕ ಇಳಿಕೆ ಮಾಡಲು ಸಹಾಯಮಾಡುತ್ತದೆ. ಬೆನ್ನು ನೋವಿನ ಸಮಸ್ಯೆ ನಿವಾರಣೆಗೆ, ರಕ್ತದೊತ್ತಡ ಕಡಿಮೆ ಮಾಡಲು, ಮೆದುಳಿನ ಶಕ್ತಿ ಹೆಚ್ಚಿಸಲು, ರೋಗ ನಿರೋಧಕ ಶಕ್ತಿ ಹೆಚ್ಚಿಸಲು, ಸಂಧಿವಾತ ಪರಿಹರಿಸಲು ಹೀಗೆ ಅನೇಕ ಪ್ರಯೋಜನಗಳನ್ನು ಯೋಗಾಭ್ಯಾಸದಿಂದ ಪಡೆಯಬಹುದಾಗಿದೆ.

ಸರಿಯಾದ ಮಾರ್ಗದರ್ಶಕರ ಮೂಲಕ ಯೋಗಾಭ್ಯಾಸ ಮಾಡಿದಲ್ಲಿ ಉತ್ತಮ ಫಲಿತಾಂಶ ಪಡೆಯುವುದರಲ್ಲಿ ಸಂದೇಹವಿಲ್ಲ.

**- ಅಂಜನಾ ರಾಘವೇಂದ್ರ ಕುಬೇರ.**
ವಾರ್ತಾ ಮತ್ತು ಸಾ.ಸಂ. ಇಲಾಖೆ, ಗದಗ.

## ಅಮೆರಿಕ ಭೇಟಿಗೆ ಕೇಂದ್ರ ಅನುಮತಿ ನಿರಾಕರಣೆ । ಸ್ಪಷ್ಟೀಕರಣ ಕೇಳಿ ಪತ್ರ ಬರೆದ ಪ್ರಿಯಾಂಕ್ ಖರ್ಗೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ತಮ್ಮ ಅಮೆರಿಕ ಭೇಟಿಗೆ ರಾಜಕೀಯ ಅನುಮತಿ ನಿರಾಕರಣೆಗೆ ಔಪಚಾರಿಕೆ ಸ್ಪಷ್ಟೀಕರಣ ನೀಡುವಂತೆ ಕೋರಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಶುಕ್ರವಾರ ಕೇಂದ್ರ ಕೇಂದ್ರ ವಿದೇಶಾಂಗ ಖಾತೆ ಸಚಿವರಾದ ಡಾ.ಎಸ್. ಜೈಶಂಕರ್ ಅವರಿಗೆ ಪತ್ರ ಬರೆದಿದ್ದಾರೆ. ಅಮೆರಿಕ ಭೇಟಿಗೆ ಕೇಂದ್ರ 2025 ರ ಜೂನ್ 14ರಿಂದ 27ರವರೆಗೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಮೆರಿಕಕ್ಕೆ ಅಧಿಕೃತ ಭೇಟಿ ನೀಡಲಿದ್ದರು. ಅದಾಗ್ಯೂ, ಅವರಿಗೆ ಕೇಂದ್ರ ವಿದೇಶಾಂಗ ಸಚಿವಾಲಯ ರಾಜಕೀಯ ಅನುಮತಿ ನಿರಾಕರಿಸಿತ್ತು. ಇದರಿಂದಾಗಿ ಅವರ ವಿದೇಶ ಯಾತ್ರೆ ಮೊಟಕುಗೊಂಡಿತ್ತು. ಬೋಸ್ಟನ್‌ನ BIO ಅಂತರರಾಷ್ಟ್ರೀಯ ಸಮಾವೇಶ ಮತ್ತು ಸ್ಯಾನ್ ಫ್ರಾನ್ಸಿಸ್ಕೋದ ವಿನ್ಯಾಸ ಆಟೋಮೇಷನ್ ಸಮ್ಮೇಳನ (DAC) ಎಂಬ ಎರಡು ಮಹತ್ವದ ಅಂತರರಾಷ್ಟ್ರೀಯ ವೇದಿಕೆಗಳ ಜೊತೆಗೆ, ಸಹಯೋಗಕ್ಕಾಗಿ, ಹೂಡಿಕೆಗಳನ್ನು ಆಕರ್ಷಿಸಲು ಮತ್ತು ರಾಜ್ಯಕ್ಕೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಈ ಭೇಟಿಯನ್ನು ಯೋಜಿಸಲಾಗಿತ್ತು. ಕರ್ನಾಟಕ ಸರ್ಕಾರವನ್ನು ಪ್ರತಿನಿಧಿಸಬೇಕಾಗಿದ್ದ ಅವರು ಉನ್ನತ ಕಂಪನಿಗಳು, ವಿಶ್ವವಿದ್ಯಾಲಯಗಳು ಮತ್ತು ಸಂಸ್ಥೆಗಳೊಂದಿಗೆ ಹಲವಾರು ಅಧಿಕೃತ ಸಭೆಗಳ ನಂತರ ಈ ಭೇಟಿಯನ್ನು ನಿಗದಿಪಡಿಸಲಾಗಿತ್ತು ಎಂದು ಪ್ರಿಯಾಂಕ್ ಖರ್ಗೆ ಅವರು ಕೇಂದ್ರ ಸಚಿವರಿಗೆ ಬರೆದ ಪತ್ರದಲ್ಲಿ ಹೇಳಿದ್ದಾರೆ. "ಕರ್ನಾಟಕವು ಭಾರತಕ್ಕೆ ಮಾತ್ರವಲ್ಲದೆ ಏಷ್ಯಾ-ಪೆಸಿಫಿಕ್ ಪ್ರದೇಶದ ತಂತ್ರಜ್ಞಾನ ಬಂಡವಾಳ ಮತ್ತು ಬೆಳವಣಿಗೆಯ ಎಂಜಿನ್ ಆಗಿದೆ. ಇದು ನಾವೀನ್ಯತೆ ಮತ್ತು ಸ್ಟಾರ್ಟ್‌ಅಪ್‌ಗಳಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಿದೆ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ವಿನ್ಯಾಸ ಮತ್ತು ಉತ್ಪಾದನೆ, ಏರೋಸ್ಪೇಸ್, ಬಾಹ್ಯಾಕಾಶ ತಂತ್ರಜ್ಞಾನ ಮತ್ತು ರಕ್ಷಣಾ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿ ತನ್ನ ಸ್ಥಾನವನ್ನು ಸ್ಥಿರವಾಗಿ ಕಾಯ್ದುಕೊಂಡಿದೆ.

## ಕಾರ್ಯಾಂಗ ಏಕಕಾಲದಲ್ಲಿ ನ್ಯಾಯಾಧೀಶ, ತೀರ್ಪುಗಾರ ಮತ್ತು ಶಿಕ್ಷೆ ಜಾರಿಗೊಳಿಸುವವರಾಗಲು ಅಸಾಧ್ಯ!

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

"ಬುಲ್ಡೋಜರ್ ನ್ಯಾಯ" ಎಂದು ಕರೆಯಲ್ಪಡುವ ನ್ಯಾಯವನ್ನು ಸುಪ್ರೀಂಕೋರ್ಟ್ ಕಾನೂನುಬಾಹಿರ ಎಂದು ಪರಿಗಣಿಸಿದೆ ಎಂದು ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಬುಧವಾರ ಎತ್ತಿ ತೋರಿಸಿದ್ದು, "ಕಾರ್ಯಾಂಗವು ಏಕಕಾಲದಲ್ಲಿ ನ್ಯಾಯಾಧೀಶರು, ತೀರ್ಪುಗಾರರು ಮತ್ತು ಶಿಕ್ಷೆಯನ್ನು ಜಾರಿಗೊಳಿಸುವವರಾಗಲು ಸಾಧ್ಯವಿಲ್ಲ." ಎಂದು ಅವರು ಹೇಳಿದ್ದಾರೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಕಾರ್ಯಾಂಗ ಏಕಕಾಲದಲ್ಲಿ ನ್ಯಾಯಾಧೀಶ

ಇಟಲಿಯಲ್ಲಿ ನಡೆದ ನ್ಯಾಯಾಧೀಶರ ಸಭೆಯಲ್ಲಿ ಸಾಮಾಜಿಕ-ಆರ್ಥಿಕ ನ್ಯಾಯವನ್ನು ನೀಡುವಲ್ಲಿ ಸಂವಿಧಾನದ ಪಾತ್ರದ ಬಗ್ಗೆ ಮಾತನಾಡಿದ ಮುಖ್ಯ ನ್ಯಾಯಮೂರ್ತಿ ಬಿ. ಆರ್. ಗವಾಯಿ ಅವರು, ಆಶ್ರಯ ಪಡೆಯುವ ಹಕ್ಕು ಮೂಲಭೂತ ಹಕ್ಕು ಎಂದು ಹೇಳಿದ್ದಾರೆ.



ಆರೋಪಿಗಳಿಗೆ ಶಿಕ್ಷೆ ನೀಡುವ ಕ್ರಮವಾಗಿ ಅವರ ಆಸ್ತಿಯನ್ನು ಕೆಡವುವ ಯಾವುದೇ ಅವಕಾಶ ಭಾರತೀಯ ಕಾನೂನಿನಲ್ಲಿ ಇಲ್ಲ. ಆದಾಗ್ಯೂ, ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಈ ಪದ್ಧತಿ ಸಾಮಾನ್ಯವಾಗಿದೆ. ಪ್ರಕರಣಗಳಲ್ಲಿ ಆರೋಪಿಗಳಾಗಿದ್ದ ಹಲವಾರು ಜನರ, ಅದರಲ್ಲೂ ಮುಖ್ಯವಾಗಿ ಮುಸ್ಲಿಮರ ಮನೆ ಮತ್ತು ಆಸ್ತಿಗಳನ್ನು ಕೆಡವುವ ಹಲವಾರು ಘಟನೆ ಇತ್ತೀಚೆಗೆ ನಡೆದಿದೆ.

ಪ್ರಕರಣಗಳಲ್ಲಿ ಆರೋಪ ಹೊತ್ತಿರುವ ವ್ಯಕ್ತಿಗಳ ಆಸ್ತಿಗಳನ್ನು ಕೆಡವುವ ಪದ್ಧತಿಯನ್ನು ಕಾನೂನುಬಾಹಿರ ಎಂದು ನವೆಂಬರ್‌ನಲ್ಲಿ ಸುಪ್ರೀಂಕೋರ್ಟ್ ಹೇಳಿದ್ದು, ಅಕ್ರಮ ಅತಿಕ್ರಮಣಗಳನ್ನು ತೆಗೆದುಹಾಕುವ ಮೊದಲು ಪ್ರಕ್ರಿಯೆಗಳನ್ನು ಅನುಸರಿಸಬೇಕು ಎಂದು ತಿಳಿಸಿತ್ತು.

ಬುಧವಾರ ಈ ತೀರ್ಪನ್ನು ಉಲ್ಲೇಖಿಸಿದ ಮುಖ್ಯ ನ್ಯಾಯಮೂರ್ತಿ ಗವಾಯಿ ಅವರು, " ಕಾನೂನು ಪ್ರಕ್ರಿಯೆಗಳನ್ನು ಬೈಪಾಸ್ ಮಾಡುವ ಇಂತಹ ಅನಿಯಂತ್ರಿತ ಧ್ವಂಸಗಳು ಕಾನೂನಿನ ನಿಯಮ ಮತ್ತು ಆರ್ಟಿಕಲ್ 21 ರ ಅಡಿಯಲ್ಲಿ ಆಶ್ರಯ ಪಡೆಯುವ ಮೂಲಭೂತ ಹಕ್ಕನ್ನು ಉಲ್ಲಂಘಿಸುತ್ತವೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ" ಎಂದು ಹೇಳಿದ್ದಾರೆ.

ಸಾಮಾನ್ಯ ನಾಗರಿಕರೊಬ್ಬರಿಗೆ ಮನೆ ಕಟ್ಟುವುದು ಎನ್ನುವುದು ವರ್ಷಗಳ ಕಾಲದ ಕಠಿಣ ಪರಿಶ್ರಮ, ಕನಸುಗಳ ಮತ್ತು ಆಕಾಂಕ್ಷೆಗಳ ಪರಾಕಾಷ್ಠೆಯಾಗಿದೆ ಎಂದು ಗವಾಯಿ ಹೇಳಿದ್ದಾರೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. "ಮನೆ ಎಂದರೆ ಕೇವಲ ಆಸ್ತಿಯಲ್ಲ, ಅದು ಸ್ಥಿರತೆ, ಭದ್ರತೆ ಮತ್ತು ಭವಿಷ್ಯಕ್ಕಾಗಿ ಕುಟುಂಬ ಅಥವಾ ವ್ಯಕ್ತಿಗಳ ಸಾಮೂಹಿಕ ಭರವಸೆಯನ್ನು ಸಾಕಾರಗೊಳಿಸುತ್ತದೆ" ಎಂದು ಮುಖ್ಯ ನ್ಯಾಯಾಮೂರ್ತಿ ಹೇಳಿದ್ದಾರೆ.

## ಇಸ್ರೇಲ್-ಇರಾನ್ ಯುದ್ಧಕ್ಕೆ ಅಮೆರಿಕ ಎಂಟ್ರಿ । 2 ವಾರಗಳಲ್ಲಿ ನಿರ್ಧರಿಸುತ್ತೇನೆ ಎಂದ ಟ್ರಂಪ್

**■ ವಿಜಯಸಾಕ್ಷಿ ಸುದ್ದಿ, ಇಸ್ರೇಲ್**

ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದಲ್ಲಿ ಅಮೆರಿಕ ಭಾಗಿಯಾಗುತ್ತದೆಯೇ ಅಥವಾ ಇಲ್ಲವೇ ಎಂಬುದನ್ನು ಮುಂದಿನ ಎರಡು ವಾರಗಳಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿರ್ಧರಿಸಲಿದ್ದಾರೆ ಎಂದು ಶ್ವೇತಭವನ ಗುರುವಾರ ತಿಳಿಸಿದೆ. ಇರಾನ್ ಮೇಲೆ ಇಸ್ರೇಲ್ ನಡೆಸುತ್ತಿರುವ ಕಾರ್ಯಾಚರಣೆಗಳಿಗೆ ಅಮೆರಿಕ ಸೇರಲಿದೆ ಎಂಬ ಊಹಾಪೋಹಗಳ ನಡುವೆ ಈ ಹೇಳಿಕೆ ಹೊರಬಿದ್ದಿದೆ. ಇಸ್ರೇಲ್-ಇರಾನ್ ಯುದ್ಧಕ್ಕೆ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಅವರು, ಟ್ರಂಪ್ ಅವರ ಸಂದೇಶವನ್ನು ಉಲ್ಲೇಖಿಸುತ್ತಾ,"ಮುಂದಿನ ದಿನಗಳಲ್ಲಿ ಇರಾನ್‌ನೊಂದಿಗೆ ಮಾತುಕತೆಗಳು ನಡೆಯಬಹುದೇ ಅಥವಾ ಇಲ್ಲವೇ ಎಂಬುದರ ಗಣನೀಯ ಅವಕಾಶವಿದೆ ಎಂಬ ಅಂಶದ ಆಧಾರದ ಮೇಲೆ, ಮುಂದಿನ ಎರಡು ವಾರಗಳಲ್ಲಿ ಈ ಸಂಘರ್ಷದಲ್ಲಿ ತೊಡಗಿಕೊಳ್ಳಬೇಕೆ ಅಥವಾ ಬೇಡವೇ ಎಂಬುದನ್ನು ನಾನು ನಿರ್ಧರಿಸುತ್ತೇನೆ." ಎಂದು ಹೇಳಿರುವುದಾಗಿ ತಿಳಿಸಿದ್ದಾರೆ.



ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಅಭಿವೃದ್ಧಿಪಡಿಸದಂತೆ ನೋಡಿಕೊಳ್ಳುವುದು ಅಧ್ಯಕ್ಷ ಟ್ರಂಪ್ ಅವರ ಆದ್ಯತೆಯಾಗಿತ್ತು ಎಂದು ಲೀವಿಟ್ ಹೇಳಿದ್ದಾರೆ. ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ನಿರ್ಮಿಸುವ ಹಂತಕ್ಕೆ "ಎಂದಿಗೂ ಬಂದಿಲ್ಲ" ಎಂದು ಅಮೆರಿಕದ ಆಡಳಿತ ಹೇಳಿದೆ ಎಂದು ಬಿಬಿಸಿ ವರದಿ ಮಾಡಿದೆ. ಬುಧವಾರವಷ್ಟೆ ಇಸ್ರೇಲ್ - ಇರಾನ್ ಸಂಘರ್ಷದಲ್ಲಿ ಪಾಲ್ಗೊಳ್ಳುವಿಕೆಯ ಯೋಜನೆಗಳನ್ನು ದೃಢೀಕರಿಸಲು ಟ್ರಂಪ್ ನಿರಾಕರಿಸಿದ್ದರು. "ನಾನು ಅದನ್ನು ಮಾಡಬಹುದು, ಅದನ್ನು ಮಾಡದೆಯು ಇರಬಹುದು" ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದರು. "ನಾನು ಏನು ಮಾಡಲಿದ್ದೇನೆಂದು ಯಾರಿಗೂ ತಿಳಿದಿಲ್ಲ. ನಾನು ನಿಮಗೆ ಒಂದು ಮಾತ್ರ ಹೇಳಬಲ್ಲೆ, ಇರಾನ್ ಬಹಳಷ್ಟು ತೊಂದರೆಗಳನ್ನು ಎದುರಿಸುತ್ತಿದ್ದು, ಅವರು ಮಾತುಕತೆ ನಡೆಸಲು ಬಯಸುತ್ತಾರೆ." ಎಂದು ಟ್ರಂಪ್ ಹೇಳಿದ್ದರು. ಅಮೆರಿಕವು ಇಸ್ರೇಲ್‌ನ ಮಿತ್ರ ರಾಷ್ಟ್ರವಾಗಿದ್ದು, ಇಸ್ರೇಲ್‌ನ ಭದ್ರತೆಗಾಗಿ ಅಮೆರಿಕ ಕಾರ್ಯನಿರ್ವಹಿಸುತ್ತದೆ.

ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಅವರು ಹೇಳಿಕೆ ನೀಡಿದ ಗಂಟೆಗಳ ನಂತರ, ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಇರಾನ್‌ನ ಉಪ ವಿದೇಶಾಂಗ ಸಚಿವ ಸಯೀದ್ ಖತೀಬ್ಜಾದೆಹ್, ಅಮೆರಿಕ ಈ ಯುದ್ಧದಲ್ಲಿ ಭಾಗಿಯಾಗಿದರೆ ಪಶ್ಚಿಮ ಏಷ್ಯಾದಲ್ಲಿ "ನರಕ" ಉಂಟಾಗುತ್ತದೆ ಎಂದು ಬಿಬಿಸಿಗೆ ತಿಳಿಸಿದ್ದಾರೆ.

## ಕವನ

# ಜಗ ಮೆಚ್ಚಿದ ಯೋಗ

ಯೋಗವ ಮಾಡೋಣ
ಪ್ರತಿದಿನ ಯೋಗವ ಮಾಡೋಣ
ಜಗವೇ ಮೆಚ್ಚಿದ ಯೋಗವ ಮಾಡಿ
ನಿರೋಗಿಯಾಗೋಣ

ನಾವು ಬಾಳ Busy
ಟೈಮೆ ಸಿಗೋಲ್ಲ Easy
ಯಾಕೆ ಇಂತಾ ರಾಗ...
ಮಾಡ್ಲೇಬೇಕು ಯೋಗ
ಬೆಳಿಗ್ಗೆಯಾಗಲಿ ಸಂಜೆಯಾಗಲಿ
ಮಾಡೋಣ ಯೋಗ
ಚಿಕ್ಕವರು ದೊಡ್ಡವರು
ಬಡವರು ಶ್ರೀಮಂತರು
ಜಾತಿ ಧರ್ಮ ಮಾಡದೆಯೆ
ನಿತ್ಯವು ಯೋಗವ ಮಾಡಿದರೆ
ಬದಲಾಗುತ್ತೈತೆ ನಮ್ಮ ಯೋಗ
ಉಲ್ಲಾಸ ಉತ್ಸಾಹ ಮೈಮನದಾಗ

ತನು ಮನದ ಐಶ್ವರ್ಯವನು ಹೆಚ್ಚಿಗೆ ಮಾಡೋಣ
ಪಂಚಬೂತದ ಶಕ್ತಿಯ ದೇಹವ ರಕ್ಷಣೆ ಮಾಡೋಣ
ವಿಶ್ವವನ್ನೆ ಒಗ್ಗೂಡಿಸೊ ಶಕ್ತಿಯ ಯೋಗವ ಮಾಡೋಣ
ವಿಶ್ವಕೆ ಯೋಗ ಗುರುವಾಗಿ ನಾವೀ ಕಲೆಯನು ಕಲಿಸೋಣ

**- ಮಂಜುನಾಥ ಸಜ್ಜನರ.**

### ಗಾಣಿಗ ವಿದ್ಯಾ-ಉದ್ಯೋಗವರ್ಧಕ ಟ್ರಸ್ಟ್‌ನ ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ. ವಿಜಯಲಕ್ಷ್ಮೀ ಬಾಳೆಕುಂದ್ರಿ


# ಗಾಣಿಗರು ಎಂದೂ ಭಯಭೀತರಾಗಿರಲು ಸಾಧ್ಯವಿಲ್ಲ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಗತ್ತಿನಲ್ಲಿ ಯಾರೂ ಸಹ ಕದಿಯಲು ಸಾಧ್ಯವಾಗದ ಜ್ಞಾನ ಸಂಪತ್ತನ್ನು ಗಳಿಸಲು ಎಲ್ಲರೂ ಕಠಿಣ ಪರಿಶ್ರಮ ಪಡಬೇಕು ಎಂದು ಖ್ಯಾತ ಹೃದಯ ರೋಗ ತಜ್ಞರಾದ ಡಾ. ವಿಜಯಲಕ್ಷ್ಮೀ ಬಾಳೆಕುಂದ್ರಿ ಅವರು ಹೇಳಿದರು.

ಅವರು ನಗರದ ಗಾಣಿಗ ಭವನದಲ್ಲಿ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ಗದಗ ಇವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ಉಚಿತ ಆರೋಗ್ಯ, ರಕ್ತದಾನ ಶಿಬಿರ, ವಾರ್ಷಿಕ ಸಭೆಯಲ್ಲಿ ಅವರು ಮಾತನಾಡಿದರು.

ನಿರಂತರ ಓದು ವ್ಯಕ್ತಿಯಲ್ಲಿ ಧೈರ್ಯ ನೀಡುತ್ತದೆ. ಆದ್ದರಿಂದ ಮಕ್ಕಳಿಗೆ ಓದಿನ ಬಗ್ಗೆ ಹೆಚ್ಚು ಪ್ರೋತ್ಸಾಹ ನೀಡಬೇಕು. ಓದು-ಓಟ ಮಕ್ಕಳಿಗೆ ಅತ್ಯಗತ್ಯವಾಗಿದೆ. ಓದು ಜ್ಞಾನ ಹೆಚ್ಚಿಸಿದರೆ ಓಟ ಶರೀರವನ್ನು ಸದೃಢವಾಗಿರಲು ಸಹಾಯಕವಾಗಿದೆ. ಶಿವ ಶಕ್ತಿ ಪಡೆದ ಗಾಣಿಗರು ಎಂದೂ ಭಯಭೀತರಾಗಿರಲು ಸಾಧ್ಯವಿಲ್ಲ. ಮಕ್ಕಳಿಗೆ ಉನ್ನತ ಶಿಕ್ಷಣ ನೀಡಿ, ಸಮಾಜದ ಸತ್ಪ್ರಜೆಗಳಾಗಿ ರೂಪಿಸಿ. ಮಕ್ಕಳಿಗೆ ಸಮಾಜಮುಖಿ ಚಿಂತನೆ, ಸಮಯಪ್ರಜ್ಞೆ, ಶಿಸ್ತು ಕಲಿಸಿ ಅವರನ್ನು ಸಮಾಜದ ಆಧಾರಸ್ತಂಭಗಳಾಗಿ ಮಾಡಿ ಎಂದು ಹೇಳಿದರು.




ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಬೇಲೂರ ಹಾಸನ ಮಠದ ಡಾ. ಮಹಾಂತ ಬಸವಲಿಂಗ ಸ್ವಾಮೀಜಿ, ಭವಿಷ್ಯದ ಪ್ರಜೆಗಳಾದ ಮಕ್ಕಳೇ ಸಮಾಜದಲ್ಲಿ ಎಷ್ಟೇ ಸಾಧನೆ ಮಾಡಿ. ಆದರೆ, ತಂದೆ-ತಾಯಿಗಳ ಕಣ್ಣಲ್ಲಿ ನೀರು ಬರದಂತೆ ನೋಡಿಕೊಂಡರೆ ಅದೇ ಎಲ್ಲಕ್ಕಿಂತ ಮಿಗಿಲಾದ ಸಾಧನೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಸವರಾಜ ಬಿಂಗಿ ಮಾತನಾಡಿ, ಕಳೆದ 8 ವರ್ಷಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಂಡು ಬಂದಿದ್ದೇವೆ. ಇದೇ ಮೊದಲ ಸಾರಿ ಸಮಾಜದ ಸಾಧಕರಿಂದ ಉಪನ್ಯಾಸ ಕೊಡಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸವಾಗಿದೆ ಎಂದರು. ದಶರಥ ಗಾಣಿಗೇರ, ಜಿ.ಪಂ ಮಾಜಿ ಅಧ್ಯಕ್ಷರು ಮತ್ತು ಕಟ್ಟಡ ಸಮಿತಿ ಅಧ್ಯಕ್ಷರಾದ ನಿಂಗಪ್ಪ ಕೆಂಗಾರ, ಗಾಣಿಗ ಸಮಾಜದ ಕುರಿತು ಪಿ.ಎಚ್‌ಡಿ ಅಧ್ಯಯನ ಮಾಡಿರುವ ಮೇಘನಾ ಜಿ., ಮುರಘರಾಜೇಂದ್ರ ಬಡ್ನಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಬೀದರನ ಸಿದ್ದರಾಮ ಮಠದ ಸಿದ್ದರಾಮ ಶ್ರೀಗಳು, ಗದಗ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಹಾಗು ಸರಕಾರಿ ಪದವಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಅಶೋಕ ಮಂದಾಲಿ, ಸಾಹಿತಗಳಾದ ಟಿ.ಬಿ. ಕರದಾನಿ, ಯೋಗಸಾನದಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಚೈತ್ರ ಸೋಮನಗೌಡ್ರ, ನರಗುಂದ ಪುರಸಭೆ ಅಧ್ಯಕ್ಷರಾದ ನೀಲ್ಲವ್ವ ಪವಾಡಪ್ಪ ವಡ್ಡಿಗೇರಿ, ನರೇಗಲ್ಲ ಸರಕಾರಿ ಪಿಯು ಕಾಲೇಜಿನ ನಿವೃತ್ತ ಪ್ರಾಚಾರ್ಯ ಎನ್.ಎಂ. ಪವಾಡಿಗೌಡ್ರ, ಬೆಂಗಳೂರ ದೂರದರ್ಶನ ಕೇಂದ್ರದ ನಿವೃತ್ತ ಅಧಿಕಾರಿ ಹೊಳೆಯಪ್ಪಗೌಡ ಪಾಟೀಲ ಇತರರನ್ನು ಸನ್ಮಾನಿಸಲಾಯಿತು.

ಸಮಾಜದ ಗಣ್ಯರಾದ ಅಶೋಕ ನವಲಗುಂದ ಮಾತನಾಡಿ, ಈ ಸಮಾಜ ಸದೃಢವಾಗಲು ಗ್ರಾಮೀಣ ಭಾಗದ ಕಟ್ಟಡ ಕಡೆಯ ವ್ಯಕ್ತಿಗೂ ಶಿಕ್ಷಣ ದೊರೆಯಬೇಕು. ಉಳ್ಳವರು, ಹಿಂದುಳಿದವರ ನೆರವಿಗೆ ಧಾವಿಸಬೇಕು ಆಗ ಮಾತ್ರ ಗಾಣಿಗ ಸಮಾಜ ಉನ್ನತಮಟ್ಟಕ್ಕೆ ಏರಲಿದೆ ಎಂದರು.

24-25ನೇ ಶೈಕ್ಷಣಿಕ ಸಾಲಿನ ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದ ತೃಪ್ತಿ ಅಳಗವಾಡಿ, ರಾಜೇಶ್ವರಿ ಚನ್ನಪ್ಪಗೌಡ್ರ, ವಿದ್ಯಾಶ್ರೀ ವಡ್ಡಗೇರಿ ಹಾಗೂ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಅಂಕಗಳಿಸಿದ ಉದಯ ಕಟ್ಟೆಣ್ಣವರ, ಪ್ರಕಾಶ ಪಾಪನಾಸಿ, ಸಾಗರ ಉಮಚಗಿ ಸೇರಿದಂತೆ 75ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಗಾಣಿಗ ಸಮಾಜದ ಗೌರವಾಧ್ಯಕ್ಷ ಷಣ್ಮುಖಪ್ಪ ಬಡ್ನಿ, ಜಿಲ್ಲಾ ಉಪಾಧ್ಯಕ್ಷ ಬಿ.ಬಿ. ಐನಾಪುರ, ಟ್ರಸ್ಟಿನ ಕಾರ್ಯಕಾರಿ ಸಮಿತಿ ಸದಸ್ಯರಾದ ಸುರೇಶ ಮರಳಪ್ಪನವರ, ಎಸ್.ವಿ. ಪವಾಡಿಗೌಡ್ರ, ಗಿರಿಯಪ್ಪ ಅಸೂಟಿ, ಗಂಗಾಧರ ಗಾಣೀಗೇರ, ರಮೇಶ ಮಂದಾಲಿ, ದಶರಥ ಗಾಣಿಗೇರ, ಬಸವರಾಜ ಸುಕಂದ, ಅಮರೇಶ ಹಾದಿ, ಶ್ರೀಕಾಂತ ಲಕ್ಕುಂಡಿ, ತೋಟಪ್ಪ ಗಾಣಿಗೇರ, ಐ.ಎಂ. ಕಿರೀಸೂರ, ಬಸವಂತಪ್ಪ ನವಲಳ್ಳಿ, ಸಂದೀಪ ಕಪ್ಪತ್ತನವರ, ಬಸವರಾಜ ನವಲಗುಂದ, ಜಗದೀಶ ಬೆಳವಟಗಿ, ಶಿವಣ್ಣ ಹಿಟ್ನಳ್ಳಿ, ಪ್ರಕಾಶ ಮುಧೋಳ, ತಿಪ್ಪಣ್ಣ ಜಕ್ಕಣ್ಣವರ, ಸಿ.ಕೆ.ಬಳೂಟಗಿ, ವೀರೇಶ ಬಸನಗೌಡ್ರ, ವಿಜಯಲಕ್ಷ್ಮೀ ಬ್ಯಾಳಿ, ಪ್ರತಿಭಾ ಬಡ್ನಿ, ಶೋಭಾ ಬಿಂಗಿ, ಮಹಾಲಕ್ಷ್ಮೀ ತೊಂಡಿಹಾಲ, ದ್ರಾಕ್ಷಾಯಣಿ ಪೂಜಾರ, ವನಜಾಕ್ಷಿ ಚನ್ನಪ್ಪಗೌಡ್ರ ಇತರರಿದ್ದರು.

ಪರಶುರಾಮ ಗವಾಯಿಗಳು ಪ್ರಾರ್ಥಿಸಿದರು. ಅಶೋಕ ಹಾದಿ ಮತ್ತು ಬಸವರಾಜ ಪರವನವರ ಕಾರ್ಯಕ್ರಮ ನಿರೂಪಿಸಿದರು. ಸುರೇಶ ಮರಳಪ್ಪನವರ ವಂದಿಸಿದರು.

# ಶ್ರೀ ಚನ್ನವೀರ ಶರಣರ ಪುಣ್ಯಸ್ಮರಣೋತ್ಸವ ನಾಳೆ




■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 30ನೇ ಪುಣ್ಯಸ್ಮರಣೋತ್ಸವ, 1008 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಶ್ರೀ ಶಿವಶಾಂತವೀರ ಶರಣರ ತುಲಾಭಾರ ಸಮಾರಂಭ ಜೂನ್ 22ರಂದು ಬೆಳಿಗ್ಗೆ 10 ಗಂಟೆಗೆ ಬಳ್ಳಾರಿಯ ಪಾರ್ವತಿ ನಗರದ ಬಸವ ಭವನದಲ್ಲಿ ಜರುಗಲಿದೆ.

ಪೂಜ್ಯ ಶ್ರೀ ಶಿವಶಾಂತವೀರ ಶರಣರು ಕಾರ್ಯಕ್ರಮದ ಪಾವನ ಸನ್ನಿಧಾನ ವಹಿಸುವರು. ಯರನಾಳ ಸಂಸ್ಥಾನ ಹಿರೇಮಠದ ಶ್ರೀ ಶಿವಪ್ರಸಾದ ದೇವರು ಶುಭ ಸಂದೇಶ ನೀಡುವರು.

ಬಳ್ಳಾರಿಯ ಎಸ್.ಜಿ.ಟಿ ಪದವಿಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಬಸವರಾಜ ಅಮಾತಿ ಪ್ರಾಸ್ತಾವಿಕ ನುಡಿಗಳನ್ನಾಡುವರು. ಕೊತ್ತಲಚಿಂತದ ಶರಣಕುಮಾರ, ಬಳ್ಳಾರಿಯ ಸುಧಾಕರವರಿಂದ ಸಂಗೀತ ಸೇವೆ ಜರುಗುವುದು. ಶರಣ ಬಳಗದ ಸದ್ಭಕ್ತರಿಂದ ಶ್ರೀ ಶಿವಶಾಂತವೀರ ಶರಣರ ತುಲಾಭಾರದ ಸೇವೆ ಜರುಗವುದು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಬಿ. ಸಿದ್ದಲಿಂಗಪ್ಪ ನಿರೂಪಿಸುವರು. ಸಮಸ್ತ ಸದ್ಭಕ್ತರು ಪಾಲ್ಗೊಳ್ಳಲು ಶ್ರೀಮಠದ ಪ್ರಕಟಣೆ ಕೋರಿದೆ.

### ಯೋಗದಲ್ಲಿ ಎಂಡಿ ಪದವಿ ಪಡೆದ ಲಕ್ಷ್ಮೇಶ್ವರದ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯ ಸಾಧಕಿ ಡಾ. ಶೃತಿ ಹೂವಿನ

# ಅಗ್ರ ಪಂಕ್ತಿಯ ಯೋಗ ಸಾಧಕಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತವಿಂದು ಯೋಗ ಗುರುವಾಗಿ ಪ್ರಖ್ಯಾತಿ ಪಡೆಯುವಲ್ಲಿ ಯೋಗವನ್ನು ವೈಜ್ಞಾನಿಕವಾಗಿ ಜಗತ್ತಿಗೆ ತಿಳಿಸಿಕೊಡುವಲ್ಲಿ ಯಶಸ್ವಿಯಾಗಿದ್ದೇ ಕಾರಣ. ಯೋಗದ ಮಹತ್ವ, ಅವಶ್ಯಕತೆ ಹೆಚ್ಚಾಗುತ್ತಿರುವ ಸಂದರ್ಭದಲ್ಲಿ ಯೋಗ ಗುರುಗಳು, ಸಾಧಕರು, ಶಿಕ್ಷಕರು, ತರಬೇತುದಾರರ ಸಂಖ್ಯೆ ಹೆಚ್ಚುತ್ತಲೇ ಇದೆ.

ಬಹುತೇಕರು ಯೋಗ ತರಬೇತಿ ಶಿಬಿರ ಮತ್ತು ನಿತ್ಯ ಅಭ್ಯಾಸದಿಂದ ಪರಿಣಿತ ಹೊಂದುತ್ತಾರೆ. ಆದರೆ ಯೋಗ ಶಿಕ್ಷಣದಲ್ಲಿಯೇ ವಿಶೇಷವಾದ ಬಿಎನ್‌ವೈಎಸ್ (ಬ್ಯಾಚ್ಯಲರ್ ಆಫ್ ನ್ಯಾಚುರೋಪತಿ ಮತ್ತು ಯೋಗಿಕ್ ಸೈನ್ಸಸ್) ಅಂದರೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ಬಗೆಗಿನ 6 ವರ್ಷಗಳ ಅಧ್ಯಯನ, ಎಂಡಿ ಪದವಿಯನ್ನು ಪಡೆದ ಲಕ್ಷ್ಮೇಶ್ವರದ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ತಜ್ಞವೈದ್ಯರಾದ ಡಾ. ಶೃತಿ ಹೂವಿನ



ಜಿಲ್ಲೆಯ ಯೋಗ ಸಾಧಕರಲ್ಲಿ ಅಗ್ರಪಂಕ್ತಿಗೆ ಸೇರುತ್ತಾರೆ.

ಸದ್ಯ ಇವರು ಲಕ್ಷ್ಮೇಶ್ವರದ ಅಗಡಿ ಸನ್‌ರೈಸ್ ಆಸ್ಪತ್ರೆಯಲ್ಲಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ತಜ್ಞರಾಗಿ ಮತ್ತು ಪಟ್ಟಣ ಸೇರಿ ಅನೇಕ ಕಡೆ ಉಚಿತ ಯೋಗ ಶಿಕ್ಷಣ, ತರಬೇತಿ ಕೊಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣದ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

2016ರಲ್ಲಿ ಮೈಸೂರಿನ ಸರ್ಕಾರಿ ನೇಚರ್ ಕ್ಯೂರ್ ಅಂಡ್ ಯೋಗ ಮೆಡಿಕಲ್ ಕಾಲೇಜಿನಲ್ಲಿ ಬಿಎನ್‌ವೈಎಸ್ ಮತ್ತು 2020ರಲ್ಲಿ ಉಜಿರೆಯ ಎಸ್‌ಡಿಎಂ ಕಾಲೇಜಿನಲ್ಲಿ ಕ್ಲಿನಿಕಲ್ ನ್ಯಾಚುರೋಪಯಲ್ಲಿ ಎಂಡಿ ಪದವಿ ಪಡೆದಿದ್ದಾರೆ.

ಯೋಗಾಭ್ಯಾಸ, ಪ್ರಕೃತಿ ಚಿಕಿತ್ಸೆಯಿಂದ ಅನೇಕ, ದೀರ್ಘಕಾಲೀನ ಮತ್ತು ಇಂಗ್ಲೀಷ್ ಔಷಧಿಯಿಂದ ಗುಣಪಡಿಸಲಾಗದ ರೋಗಗಳನ್ನು ಗುಣಪಡಿಸಬಹುದು ಎನ್ನುವದನ್ನು ವೈದ್ಯಕೀಯ ಶಿಕ್ಷಣದಿಂದ ಕಲಿತ ಡಾ. ಶೃತಿ ಹೂವಿನ ಇಂದು ಸಾವಿರಾರು ರೋಗಿಗಳಿಗೆ ಹೊಸ ಜೀವನ, ಆರೋಗ್ಯಕರ ಜೀವನ, ಸಮಾಜಕ್ಕಾಗಿ ಉಚಿತ ಯೋಗ ತರಬೇತಿ, ಪ್ರಕೃತಿ ಚಿಕಿತ್ಸೆ ಶಿಕ್ಷಣ ನೀಡುವ ಮೂಲಕ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ.

ಡಾ. ಶೃತಿ ಹೂವಿನ ಅವರದ್ದು ವೈದ್ಯ ವೃತ್ತಿಯ ಕುಟುಂಬ. ತಂದೆ, ತಾತ, ಚಿಕ್ಕಪ್ಪ, ದೊಡ್ಡಪ್ಪ, ಅಕ್ಕಂದಿರು, ಮಾವಂದಿರು ಹೀಗೆ ಎಲ್ಲರೂ ವೈದ್ಯಕೀಯ ವೃತ್ತಿಯಲ್ಲಿ ತೊಡಗಿಸಿಕೊಂಡು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ.

> ಪ್ರಕೃತಿ ನಮಗೆ ನೀಡಿದ ಅನೇಕ ಕೊಡುಗೆಗಗಳಲ್ಲಿ ಯೋಗವೂ ಒಂದು. ಯೋಗ ನಮಗೆ ನಾವೇ ಕಂಡುಕೊಳ್ಳುವ ಚಿಕಿತ್ಸೆ ಮತ್ತು ಅರೋಗ್ಯದ ಕಣಜ. ಒತ್ತಡಮುಕ್ತ ಮತ್ತು ಶಾಂತಿಯುತ ಬದುಕಿಗಾಗಿ ಯೋಗ–ಪ್ರಾಣಾಯಾಮಗಳು ಸಾಧನವಾಗಿವೆ. ಯೋಗ ಎಲ್ಲ ವಯೋಮಾನದವರ ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಆರೋಗ್ಯಕ್ಕೂ ಮದ್ದಾಗಿದೆ. ಯೋಗ ನಿತ್ಯದ ಬದುಕಿನ ಅಂಗವಾಗಬೇಕು. ಕೇವಲ ಜೂ.21ಕ್ಕೆ ಯೋಗ ದಿನ ಸೀಮಿತವಾಗದೇ ಅದು ನಿತ್ಯನೂತನವಾಗಲಿ.
>
> **– ಡಾ. ಶೃತಿ ಹೂವಿನ.**
> ಯೋಗ–ಪ್ರಕೃತಿ ಚಿಕಿತ್ಸಾ ತಜ್ಞೆ.

ಯೋಗ ಶಿಬಿರದಲ್ಲಿ ಬೊಜ್ಜು, ಬಿಪಿ, ಶುಗರ್, ಕೀಲು ನೋವು, ಬೆನ್ನು, ತಲೆ ನೋವು, ಆತಂಕ, ನಿದ್ರಾಹೀನತೆ, ಮಾನಸಿಕತೆ ನಿವಾರಣೆಯ ಬಗ್ಗೆ ಯೋಗ ಶಿಕ್ಷಣ ಕೊಡುತ್ತಾರೆ. ಸ್ತ್ರೀಯರ ಆರೋಗ್ಯ ಸಮಸ್ಯೆ, ಮಕ್ಕಳು, ಹಿರಿಯರ ಆರೋಗ್ಯ ಚಿಕಿತ್ಸೆಗೆ ಬರುವವರಿಗೆ ಪ್ರತಿದಿನ ಮುದ್ರೆ, ಯೋಗ, ಪ್ರಾಣಾಯಾಮ ಮಾಡುವ



ವಿಧಾನ ತಿಳಿಸಿ ನಿತ್ಯ ಬದುಕಿನಲ್ಲಿ ಯೋಗ ರೂಢಿಸಿಕೊಳ್ಳುವಂತೆ ತಿಳಿಸುತ್ತಾರೆ.

# ‘ನೀ ಸಿಗುವ ಮೊದಲು’ ಪೋಸ್ಟರ್ ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ರೀ ವೀರಭದ್ರೇಶ್ವರ ಸಿನಿ ಕ್ರಿಯೇಷನ್ ಅವರ ಮನು ಸಹಕಾರದ ‘ನೀ ಸಿಗುವ ಮೊದಲು’ ಎಂಬ ಸ್ಟೋರಿ ಕಂಟೆಂಟ್ ಆಲ್ಬಮ್ ಸಾಂಗ್ ಹಾಗೂ ಹೊಸ ಚಲನಚಿತ್ರದ ಪೋಸ್ಟರನ್ನು ಚಲನಚಿತ್ರ ನಟ ಧ್ರುವ ಸರ್ಜಾ ಬಿಡುಗಡೆ ಮಾಡಿ ಯುವ ಕಲಾವಿದರಿಗೆ, ತಂಡಕ್ಕೆ ಶುಭ ಕೋರಿದರು.

ಖ್ಯಾತ ನಟ ಧ್ರುವ ಸರ್ಜಾ ಅವರು ಪೋಸ್ಟರ್ ಬಿಡುಗಡೆ ಮಾಡಿ ಪ್ರೋತ್ಸಾಹಿಸಿ ಶುಭ ಹಾರೈಸಿರುವುದು ನಮ್ಮ ಭಾಗ್ಯ. ನಿಜಕ್ಕೂ ನಮ್ಮ ತಂಡಕ್ಕೆ ಖುಷಿಯಾಗಿದೆ. ಚಿತ್ರದಲ್ಲಿ ಕಲಾವಿದರಾದ ಮೋಹನ್ ಬಿ ಮತ್ತು ಅಶ್ವಿನಿ ಶೆಟ್ಟಿ ಮನೋಜ್ಞವಾಗಿ ನಟಿಸಿದ್ದಾರೆ. ಸದ್ಯ ಆಲ್ಬಂ ಸಾಂಗ್ ಮಾತ್ರ ಬಿಡುಗಡೆ ಮಾಡುತ್ತಿದ್ದು, ಇದೇ ಹೆಸರಿನಲ್ಲಿ ಚಲನಚಿತ್ರ ನಿರ್ಮಾಣ ತಯಾರಿ ನಡೆಸಿದ್ದೇವೆ. ಶೀಘ್ರದಲ್ಲೇ ಚಿತ್ರೀಕರಣ ಕೂಡ ಆರಂಭಿಸುತ್ತೇವೆ ಎಂದು ನಿರ್ದೇಶಕ ರಘು ತಿಳಿಸಿದರು.

ಚಿತ್ರಕಥೆ, ನಿರ್ದೇಶನ ರಘು ಅ.ರೂಗಿ, ಸಂಭಾಷಣೆ, ಸಹನಿರ್ದೇಶನ ರಮೇಶ್ ಜಿ.ಆರ್, ಕಥೆ, ಸಾಹಿತ್ಯ, ಸಂಗೀತ ವಿಶಾಲ್ ಆಲಾಪ್, ಹಿನ್ನೆಲೆ ಸಂಗೀತ ಎ.ಟಿ. ರವೀಶ್, ಸಂಕಲನ, ಛಾಯಾಗ್ರಹಣ ಪ್ರೀತಮ್ ಪೂಜಾರಿ, ಗಾಯನ ವಿಶಾಕ್ ನಾಗಲಾಪುರ, ಕೀರ್ತನ ಚಂದ್ರು, ಮ್ಯುಜಿಷಿಯನ್ ಅಭಿನವ್ ಅಯ್ಯಂಗಾರ್, ಸೌಂಡ್ ಇಂಜಿನಿಯರ್ ವಿಜಯ್ ಅರುಣ್, ರಘು ರೂಗಿ, ಪ್ರೋಗ್ರಾಮ್ ತೇಜಸ್ ಮತ್ತು ಆಕಾಶ್, ಮಾಸ್ಟರಿಂಗ್–ಮಿಕ್ಸಿಂಗ್ ಸುರಾಜ್ ಎಸ್.ವಾಸುದೇವ್, ಸಹಾಯ ಭಗವತಿ ಕಾಟೇಜ್ (ಮಡಿಕೇರಿ), ಮೋದಿ ತಳವಾರ, ಪ್ರೊಡಕ್ಷನ್ ಮ್ಯಾನೇಜರ್ ರಾಹುಲ್ ಎನ್.ಎಚ್, ಮಾಧ್ಯಮ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಿಗಿ, ನಿರ್ಮಾಪಕರು ವನಿ ಕಾಂತರಾಜ್ (ಬೇಲೂರು) ಆಗಿದ್ದಾರೆ.

# ಗ್ರಂಥಾಲಯಗಳ ಸದುಪಯೋಗದೊಂದಿಗೆ ಜ್ಞಾನವಂತರಾಗಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ಜ್ಞಾನಿಗಳಿಗೆ ಬಹಳಷ್ಟು ಮಹತ್ವವಿದೆ. ಮನುಷ್ಯನಿಗೆ ಪುಸ್ತಕಗಳು ಜ್ಞಾನವನ್ನು ನೀಡುತ್ತವೆ. ಇಲ್ಲಿ ಪ್ರಾರಂಭಗೊಂಡಿರುವ ಈ ಗ್ರಂಥಾಲಯವನ್ನು ಸದುಪಯೋಗಪಡಿಸಿಕೊಂಡು ಜ್ಞಾನವಂತರಾಗಿರಿ ಎಂದು ಕುರುಡಗಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಿವನಗೌಡ ಸಿದ್ದನಗೌಡ ಹೇಳಿದರು.

ಸಮೀಪದ ಯರೆಬೇಲೇರಿ ಗ್ರಾಮದಲ್ಲಿ ಅವರು ಡಾ. ಬಿ.ಆರ್. ಅಂಬೇಡ್ಕರ ಗ್ರಂಥಾಲಯವನ್ನು ಉದ್ಘಾಟಿಸ್ಕಿವರು ಮಾತನಾಡಿದರು.

ಗ್ರಾಮಕ್ಕೊಂದು ಗ್ರಂಥಾಲಯವಿದ್ದರೆ ಅದು ಆ ಗ್ರಾಮದ ಸಾಂಸ್ಕೃತಿಕ ಕೇಂದ್ರವಾಗುತ್ತದೆ. ಇಲ್ಲಿನ ಗ್ರಂಥಗಳನ್ನು ಓದುವದರಿಂದ ನಮ್ಮಲ್ಲಿನ ಜ್ಞಾನ ತಾನೇ ತಾನಾಗಿ ಹೆಚ್ಚಾಗುತ್ತದೆ. ಆದ್ದರಿಂದ ನಿಮ್ಮ ಬಿಡುವಿನ ವೇಳೆಯನ್ನು ಹಾಳು ಹರಟೆಯಲ್ಲಿ ಕಳೆಯದೆ ಈ ಗ್ರಂಥಾಲಯಕ್ಕೆ ಬಂದು ಪತ್ರಿಕೆ, ಪುಸ್ತಕ ಓದಿ ನಿಮ್ಮ ಜ್ಞಾನವನ್ನು ಬೆಳೆಸಿಕೊಳ್ಳಿ. ಓದಿಗೆ ಇನ್ನೊಂದು ಹೆಸರೇ ಡಾ. ಅಂಬೇಡ್ಕರರಾಗಿದ್ದರು. ಅವರ ಹೆಸರಿನಲ್ಲಿ ಪ್ರಾರಂಭವಾದ ಈ ಗ್ರಂಥಾಲಯದಿಂದ ಒಬ್ಬರಾದರೂ ಜ್ಞಾನಿಗಳು ಈ ಗ್ರಾಮದಿಂದ ಹೊರಹೊಮ್ಮಲಿ ಎಂದು ಅವರು ಆಶಿಸಿದರು.



ರೋಣ ಸಿಪಿಐ ಎಸ್.ಎಸ್. ಬೀಳಗಿ ಮಾತನಾಡಿ, ಜಗತ್ತಿನಲ್ಲಿ ದಾರ್ಶನಿಕರೆನಿಸಿಕೊಂಡವರೆಲ್ಲರೂ ತಮ್ಮಲ್ಲಿನ ಜ್ಞಾನದ ಮೂಲಕ ಜಗದ್ವಿಖ್ಯಾತರಾಗಿದ್ದಾರೆ. ಜೀವನವೆಂದರೆ ಬರೀ ದುಡಿಮೆ, ಊಟ, ನಿದ್ರೆ ಮಾತ್ರವಲ್ಲ. ನಮ್ಮ ನಿತ್ಯದ ಜೀವನದೊಂದಿಗೆ ನಮ್ಮ ಜ್ಞಾನದ ವಿಕಾಸವನ್ನೂ ಮಾಡಿಕೊಳ್ಳಬೇಕು. ಅದಕ್ಕೆ ಇಂತಹ ಗ್ರಂಥಾಲಯಗಳು ಸಹಾಯ ಮಾಡುತ್ತವೆ ಎಂದರು.

ಸಭೆಯನ್ನುದ್ದೇಶಿಸಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸಿ.ಕೆ. ಕಂದಕೂರ, ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ ಇನ್ನಿತರರು ಮಾತನಾಡಿದರು. ಸಭೆಯಲ್ಲಿ ಗ್ರಾ.ಪಂ ಸದಸ್ಯರಾದ ರಮೇಶ ಕಡೇಮನಿ, ಅಲ್ಲಾಬಕ್ಷಿ ನದಾಫ್, ಪಿಡಿಒ ಶಿಲಪಾ ಕವಲೂರ, ಶಿಕ್ಷಕರಾದ ಭಜಂತ್ರಿ, ಮಹೇಶ ಕೇರಿ, ಗ್ರಾ.ಪಂ ಸಿಬ್ಬಂದಿ ಮತ್ತು ಗ್ರಾಮದ ಗಣ್ಯರು ಉಪಸ್ಥಿತರಿದ್ದರು.

# ಭಾವಗೀತೆಗಳ ರಚನೆಯ ಹರಿಕಾರ ಎಚ್.ಎಸ್.ವಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಭಾವಗೀತೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬರಹ ರೂಪದಲ್ಲಿ ಪ್ರಕಟಿಸಿದ ಶ್ರೇಯಸ್ಸು ಖ್ಯಾತ ಕವಿ ದಿವಂಗತ ಎಚ್.ಎಸ್. ವೆಂಕಟೇಶಮೂರ್ತಿ ಅವರಿಗೆ ಸಲ್ಲುತ್ತದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮಾಜಿ ಅಧ್ಯಕ್ಷ ರವಿತೇಜ ಅಬ್ಬಿಗೇರಿ ಅಭಿಪ್ರಾಯಪಟ್ಟರು.

ಇಲ್ಲಿಯ ಕುಷ್ಟಗಿ ರಸ್ತೆಯಲ್ಲಿರುವ ಪದಕಿ ಟೌನ್ ಶಿಪ್ ಪ್ರದೇಶದ ಶಾಂತಿ ನಿವಾಸದಲ್ಲಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಖ್ಯಾತ ಕವಿ ಡಾ. ಎಚ್.ಎಸ್. ವೆಂಕಟೇಶಮೂರ್ತಿ ಅವರಿಗೆ ನುಡಿನಮನ ಹಾಗೂ ಜಿಲ್ಲಾ ಮಟ್ಟದ ಮುಂಗಾರು ಕಾವ್ಯೋತ್ಸವ ಕಾರ್ಯಕ್ರಮದಲ್ಲಿ ಎಚ್.ಎಸ್.ವಿ ಅವರ ಬದುಕು–ಬರಹ ಕುರಿತು ಮಾತನಾಡಿದರು.




ಚಲನಚಿತ್ರ ಅಕಾಡೆಮಿ ಸದಸ್ಯೆ ಸಾವಿತ್ರಿ ಮುಜಾಮದಾರ್ ಮಾತನಾಡಿ, ಎಚ್.ಎಸ್.ವಿ ಅವರೊಂದಿಗಿನ ಒಡನಾಟ ಸ್ಮರಿಸಿದರು. ಕನ್ನಡ ಪಂಡಿತ್ ಶಿಕ್ಷಕ ತೀರ್ಥಯ್ಯ ಮಠದ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ಶಿ.ಕಾ. ಬಡಿಗೇರ, ದೊಡ್ಡಯ್ಯ ಮಳಿಮಠ, ಚಿಂತಕ ಅಮೀನಸಾಬ್ ಮುಲ್ಲಾ, ಸ್ಪರ್ಧಾಸ್ಫೂರ್ತಿ ಸಂಪಾದಕ ಎಚ್.ಆರ್. ವಸ್ತ್ರದ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ನಂತರ ನಡೆದ ಮುಂಗಾರು ಕಾವ್ಯೋತ್ಸವದಲ್ಲಿ ಕವಿಗಳಾದ ಎ.ಪಿ. ಅಂಗಡಿ, ಪುಷ್ಪಲತಾ ಯೋಳಭಾವಿ, ಶಿವಮ್ಮ ಗುರುಸ್ಥಳಮಠ. ಶಾರದಾ ಶ್ರಾವಣಸಿಂಗ್ ರಜಪೂತ, ಡಾ. ಪ್ರಕಾಶ್ ಹಳ್ಳಿಗುಡಿ, ಸುಮಂಗಲಾ ಹಂಚಿನಾಳ, ಪ್ರದೀಪ್ ಹದ್ದಣ್ಣವರ್, ಪೂಜಾ ವಣಗೇರಿ, ವೀರೇಶ ಇಂದರಗಿ, ಶಿವಪ್ರಸಾದ್ ಹಾದಿಮನಿ, ನಿಂಗಪ್ಪ ಕೆ, ಅಕ್ಕಮಹಾದೇವಿ ಅಂಗಡಿ, ಶರಭಯ್ಯಸ್ವಾಮಿ ಹಿರೇಮಠ ಮೊದಲಾದವರು ಕವಿತೆ ವಾಚಿಸಿದರು.

ಚು.ಸಾ.ಪ ಜಿಲ್ಲಾಧ್ಯಕ್ಷ ರುದ್ರಪ್ಪ ಆರ್.ಭಂಡಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿವಪ್ರಸಾದ್ ಹಾದಿಮನಿ ನಿರೂಪಿಸಿದರು. ಪ್ರದೀಪ ಹದ್ದಣ್ಣವರ್ ವಂದಿಸಿದರು.

# ವಿಶೇಷ ಡಿ.ಎಡ್ ತರಬೇತಿಗೆ ಅರ್ಜಿ ಅಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ವತಿಯಿಂದ ನಡೆಯುತ್ತಿರುವ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ ಮೈಸೂರು ಇಲ್ಲಿ ಅಂಧ ಮಕ್ಕಳಿಗೆ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್ ತರಬೇತಿಗೆ ಅರ್ಜಿಯನ್ನು ಅಹ್ವಾನಿಸಲಾಗಿದೆ.

ಈ ವಿಶೇಷ ಡಿ.ಎಡ್, ಸಾಮಾನ್ಯ ಡಿ.ಎಡ್‌ಗೆ ಸಮಾನಾಂತರವಾಗಿವೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.50 (ಎಸ್.ಸಿ, ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು 12/07/2025ರ ಒಳಗೆ ವೆಬ್‌ಸೈಟ್ https://nber-rehabcouncil.gov.in/ ನಲ್ಲಿ ಅರ್ಜಿ ಸಲ್ಲಿಸಬಹುದು. ಈ ತರಬೇತಿ ಕಾರ್ಯಕ್ರಮಗಳು ರೆಗ್ಯೂಲರ್ ಆಗಿದ್ದು, ವಿಕಲಚೇತನರು ಸೇರಿದಂತೆ ಸಾಮಾನ್ಯ ವಿದ್ಯಾರ್ಥಿಗಳು ಸಹ ಅರ್ಜಿ ಸಲ್ಲಿಸಬಹುದು. ತರಬೇತಿಗಳು ಸಂಪೂರ್ಣವಾಗಿ ಉಚಿತವಾಗಿದ್ದು, ಯಾವುದೇ ಬೋಧನಾ ಶುಲ್ಕ ಇರುವುದಿಲ್ಲ.

**ತರಬೇತಿ ಕಾರ್ಯಕ್ರಮಗಳು:**

D.Ed.Spl.Ed(VI)- Helen Keller Govt. Teachers Training Centre for Visually Handicapped - KK016 D.Ed.Spl.Ed(HI)?Govt. Teachers Training Centre for Hearing Handicapped - KK015

ತರಬೇತಿಯನ್ನು ಪಡೆದ ವಿದ್ಯಾರ್ಥಿಗಳಿಗೆ ಹಲವು ಉದ್ಯೋಗ ಅವಕಾಶಗಳಿರುತ್ತವೆ. ರಾಜ್ಯ ಸರ್ಕಾರದ ಸಾಮಾನ್ಯ ಶಾಲೆ ಮತ್ತು ವಿಶೇಷ ಶಾಲೆಗಳೆರಡರಲ್ಲೂ ಶಿಕ್ಷಕರಾಗಬಹುದು. ವಿಕಲಚೇತನರ ಇಲಾಖೆಯ ಅಡಿಯಲ್ಲಿ ಬರುವ ಸರ್ಕಾರಿ/ಅನುದಾನಿತ ಶಾಲೆಗಳಲ್ಲಿ ಶಿಕ್ಷಕರಾಗಬಹುದು. CBSC ಶಾಲೆಗಳಲ್ಲಿ ಶಿಕ್ಷಕರಾಗಬಹುದು. ಸರ್ವ ಶಿಕ್ಷಣ ಅಭಿಯಾನದಲ್ಲಿ ಸಂಪನ್ಮೂಲ ಶಿಕ್ಷಕರಾಗಬಹುದು. ಜಿಲ್ಲಾ ಆಸ್ಪತ್ರೆಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯ ನಿರ್ವಹಿಸಬಹುದು. ರಾಷ್ಟ್ರೀಯ ಸಂಸ್ಥೆಗಳು/ಪ್ರಾದೇಶಿಕ ಸಂಸ್ಥೆಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯನಿರ್ವಹಿಸಬಹುದು. ಮಾತಿನ ತರಬೇತಿ ಘಟಕಗಳಲ್ಲೂ ಕಾರ್ಯನಿರ್ವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ (ತರಬೇತಿ) ಕಛೇರಿ, ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರ ಪುಲಿಕೇಶಿ ರಸ್ತೆ, ತಿಲಕ್‌ನಗರ, ಮೈಸೂರು–570001. ದೂರವಾಣಿ ಸಂ:0821– 2491600, ತರಬೇತಿ ಸಂಯೋಜಕರು: ಆಶಾ ವಿ.ಹಿರೇಮಠ್–9113561620 ಟಿ.ಡಿ. ಮಂಜುನಾಥ–9686762378 ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

# ಬಡ ಮಕ್ಕಳು ಇಂಗ್ಲಿಷ್ ಕಲಿಯುವುದು ಬಿಜೆಪಿ, ಆರೆಸ್ಸೆಸ್ ಬಯಸುವುದಿಲ್ಲ: ಅಮಿತ್ ಶಾ ಹೇಳಿಕೆಗೆ ರಾಹುಲ್ ಪ್ರತಿಕ್ರಿಯೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತದಲ್ಲಿ ಇಂಗ್ಲಿಷ್ ಮಾತನಾಡುವವರು ಶೀಘ್ರದಲ್ಲೇ ನಾಚಿಕೆಪಡುವಂತಾಗುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯನ್ನು ಶುಕ್ರವಾರ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಟೀಕಿಸಿದ್ದು, ಇಂಗ್ಲಿಷ್ ಭಾಷೆಯು ತಡೆಯಲ್ಲ, ಬದಲಾಗಿ ಸೇತುವೆಯಾಗಿದೆ, ಇದು ಉದ್ಯೋಗವನ್ನು ಒದಗಿಸುತ್ತದೆ ಮತ್ತು ಜನರ ಆತ್ಮ ವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ. ಬಡ ಮಕ್ಕಳು ಇಂಗ್ಲಿಷ್

ಅಮಿತ್ ಶಾ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ರಾಹುಲ್ ಗಾಂಧಿ ಅವರು, “ಬಡ ಮಕ್ಕಳು ಇಂಗ್ಲಿಷ್ ಕಲಿಯುವುದನ್ನು ಬಿಜೆಪಿ ಮತ್ತು ಆರೆಸ್ಸೆಸ್ ಬಯಸುವುದಿಲ್ಲ. ಏಕೆಂದರೆ ಅವರು ಪ್ರಶ್ನೆಗಳನ್ನು ಕೇಳುವುದು, ಮುಂದುವರಿಯುವುದು ಮತ್ತು ಸಮಾನತೆಯನ್ನು ಪ್ರತಿಪಾದಿಸುವುದು ಬಯಸುವುದಿಲ್ಲ” ಎಂದು ಅವರು ಆರೋಪಿಸಿದ್ದಾರೆ.

ಇಂದಿನ ಜಗತ್ತಿನಲ್ಲಿ, ಇಂಗ್ಲಿಷ್ ಕಲಿಯುವುದು ಮಾತೃಭಾಷೆಯನ್ನು ಕಲಿಯುವಷ್ಟೇ ಮುಖ್ಯ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಅಮಿತ್ ಶಾ ಅವರ ಹೇಳಿಕೆಯನ್ನು ಇತರ ವಿಪಕ್ಷಗಳು ಕೂಡಾ ಟೀಕಿಸಿದ್ದು, ದ್ರಾವಿಡ ಮುನ್ನೇತ್ರ ಕಳಗಂ ಸಂಸದೆ ಕನಿಮೋಳಿ ಅವರು ಪ್ರತಿಕ್ರಿಯಿಸಿ, “ನಿಮ್ಮ ಇಚ್ಛೆಯನ್ನು ಜನರ ಮೇಲೆ ಹೇರುವುದು ಮತ್ತು ಭಾರತದ ಬಹುತ್ವವನ್ನು ನಾಶಮಾಡಲು ಪ್ರಯತ್ನಿಸುವುದು ನಾಚಿಕೆಪಡಬೇಕಾದ ಏಕೈಕ ವಿಚಾರ” ಎಂದು ಹೇಳಿದ್ದಾರೆ.

ಕೇರಳ ಶಿಕ್ಷಣ ಸಚಿವ, ಕಮ್ಯುನಿಸ್ಟ್ ಪಕ್ಷ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ನಾಯಕ ವಿ. ಶಿವನ್‌ಕುಟ್ಟಿ ಪ್ರತಿಕ್ರಿಯಿಸಿ, ಯಾವುದೇ ಭಾಷೆ ಮೇಲಲ್ಲ ಅಥವಾ ಕೀಳಲ್ಲ ಎಂದು ಹೇಳಿದ್ದಾರೆ. “ಪ್ರತಿಯೊಂದು ಭಾಷೆಗೂ ತನ್ನದೇ ಆದ ಪ್ರಾಮುಖ್ಯತೆ ಇದೆ. ಅಂತರರಾಷ್ಟ್ರೀಯ ಭಾಷೆಯಾಗಿ ಇಂಗ್ಲಿಷ್ ಜ್ಞಾನ ಮತ್ತು ಸಂವಹನದ ಪ್ರಮುಖ ಸಾಧನವಾಗಿದೆ.

### ಕಸಾಪ ವತಿಯಿಂದ ಬಾನು ಮುಷ್ತಾಕರ ‘ಎದೆಯ ಹಣತೆ’ ಪುಸ್ತಕ ವಿಮರ್ಶೆ

# ಭೇದರಹಿತ ಸಾಮಾಜಿಕ ವ್ಯವಸ್ಥೆಯ ಪ್ರತಿಪಾದನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪುರುಷ ಪ್ರಧಾನ ಸಾಮಾಜಿಕ ವ್ಯವಸ್ಥೆಯಲ್ಲಿ ಮಹಿಳೆ ಅನುಭವಿಸುವ ಸಮಸ್ಯೆಗಳನ್ನು ಕತೆಗಳ ಮೂಲಕ ಸಮಾಜದೆದುರು ತೆರೆದಿಡುವ ಪ್ರಯತ್ನವನ್ನು ‘ಎದೆಯ ಹಣತೆ’ ಕೃತಿಯಲ್ಲಿ ಬಾನು ಮುಷ್ತಾಕ ಅವರು ಮಾಡಿದ್ದಾರೆ. ಸಮಾನತೆಯ ತಳಹದಿಯ ಮೇಲೆ ಮಹಿಳೆಯ ಬದುಕು ರೂಪುಗೊಳ್ಳಬೇಕು. ಹೆಣ್ಣಿನ ಆಶೋತ್ತರಗಳನ್ನು ಅರ್ಥೈಸಿಕೊಂಡು ಸ್ಪಂದಿಸುವ ಕುಟುಂಬ ವ್ಯವಸ್ಥೆ ರೂಪಗೊಳ್ಳುವ ಅವಶ್ಯಕತೆಯನ್ನು ಇಲ್ಲಿಯ ಕತೆಗಳು ವ್ಯಕ್ತಪಡಿಸುತ್ತವೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಂಶೋಧಕ ಮಂಜುನಾಥ ಕರಲಿಂಗಣ್ಣವರ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಗದುಗಿನ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಜರುಗಿದ ಬೂಕರ್ ಪ್ರಶಸ್ತಿ ಪುರಸ್ಕೃತ ‘ಎದೆಯ ಹಣತೆ’ ಕೃತಿಯ ಕುರಿತು ನಡೆದ ಸಂವಾದದಲ್ಲಿ ಮಾತನಾಡಿದರು.




ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಸಾಮಾಜಿಕ ಸಮಾನತೆಗೆ ಶಿಕ್ಷಣವೊಂದೇ ಪ್ರಬಲ ಅಸ್ತ್ರವಾಗಿದೆ. ಶಿಕ್ಷಣದ ಕೊರತೆಯಿಂದ ಆರ್ಥಿಕ ಅಸಮಾನತೆ ತಲೆದೋರಿ ಅಸಮಾನ ವ್ಯವಸ್ಥೆ ಸಮಾಜದಲ್ಲಿ ರೂಪಗೊಳ್ಳುತ್ತಿದೆ. ಬಡವರು, ಕೆಳವರ್ಗದ ಜನರು ಅಮಾನವೀಯ ಕಟ್ಟಳೆಗಳಿಗೆ ಬಲಿಯಾಗುತ್ತಿದ್ದಾರೆ. ಮಹಿಳೆ ತನ್ನ ಇಡೀ ಜೀವನವನ್ನು ಕುಟುಂಬದ ಒಳಿತಿಗಾಗಿ ಮೀಸಲಿಟ್ಟರೂ ಎರಡನೇ ದರ್ಜೆಯ ಸ್ಥಾನಮಾನವನ್ನು ಹೊಂದಿದ್ದಾಳೆ. ಕತೆಗಳ ಮೂಲಕ ಮಹಿಳೆಯ ಸಮಸ್ಯೆಗಳನ್ನು ಮುಂದಿಟ್ಟು ಪರಿಹಾರವನ್ನು ಸೂಚಿಸುವ ಮನಸ್ಥಿತಿಯನ್ನು ನಿರ್ಮಿಸುವ ಪಯತ್ನವನ್ನು ಬಾನು ಮುಷ್ತಾಕ ಅವರು ಮಾಡುತ್ತಾರೆ ಎಂದು ತಿಳಿಸಿದರು.

> ಇದು ಮಹಿಳೆಯರ ಜೀವನ, ಸಾಮಾಜಿಕ ಸಮಸ್ಯೆಗಳು ಮತ್ತು ಸಹಿಷ್ಣುತೆಯ ಕುರಿತು ಪ್ರತಿಪಾದಿಸುತ್ತದೆ. ಇಲ್ಲಿರುವ 12 ಕತೆಗಳು ಭಾವನಾತ್ಮಕವಾಗಿ ಆಳವಾಗಿದ್ದು, ಓದುಗನಲ್ಲಿ ಸಂವೇದನೆಯನ್ನು ಸೃಷ್ಟಿಸುತ್ತವೆ. ಕುಟುಂಬದ ಪಾಲನೆಯ ಹಿನ್ನೆಲೆಯಲ್ಲಿ ಹೆಣ್ಣು ತೋರುವ ಬದ್ಧತೆ, ಸಹನೆ, ತಾಳ್ಮೆಯಂತಹ ಗುಣಗಳನ್ನು ಎತ್ತಿ ತೋರುತ್ತದೆ. ತನ್ಮೂಲಕ ಭೇದರಹಿತ ಸಾಮಾಜಿಕ ವ್ಯವಸ್ಥೆಯನ್ನು ಪ್ರತಿಪಾದಿಸುತ್ತವೆ ಎಂದು ಮಂಜುನಾಥ ಕರಲಿಂಗಣ್ಣವರ ತಿಳಿಸಿದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಕ್ಷಿತಾ ಗಿಡ್ನಂದಿ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಕಾರ್ಯಕ್ರಮದಲ್ಲಿ ದತ್ತಪ್ರಸನ್ನ ಪಾಟೀಲ, ರತ್ನಕ್ಕ ಪಾಟೀಲ, ಶಾರದಾ ಬಾಣದ, ಸುಶಾಂತೆ ನೀಲಗುಂದ, ಜಯಶ್ರೀ ಅಂಗಡಿ, ಅನಸೂಯಾ ಮಿಟ್ಟಿ, ಶೇಖಣ್ಣ ಕಳಸಾಪೂರಶೆಟ್ರ, ಸೈಯದಉಸ್ಮಾನ ಕೊಪ್ಪಳ, ಬಸವರಾಜ ತೋಟಗೇರ, ಜಯದೇವ ಭಟ್, ಡಿ.ಜಿ. ಕುಲಕರ್ಣಿ, ಬಸವರಾಜ ವಾರಿ, ಹನುಮರಡ, ಬಸವರಾಜ ಗಣಪ್ಪನವರ, ರಾಜಶೇಖರ ದಾನರಡ್ಡಿ, ನೀಲಮ್ಮ ಅಂಗಡಿ, ಶೈಲಜಾ ಗಿಡ್ನಂದಿ, ಬಿ.ಬಿ. ಹೊಳಗುಂದಿ, ಎಂ.ಎಸ್. ಹಾಲಶೆಟ್ಟಿ, ಅಮೃತಾ ಚನ್ನಪ್ಪಗೌಡರ, ಐ.ಕೆ. ಕಮ್ಮಾರ, ರತ್ನಾ ಪುರಂತರ, ವಿದ್ಯಾಧರ ದೊಡಮನಿ, ಗುರಪ್ಪ ಗಿರಿತಿಮ್ಮಣ್ಣವರ, ಬಿ.ಜಿ. ಗಿರಿತಿಮ್ಮಣ್ಣವರ, ಶಾಂತಲಾ ಹಂಚಿನಾಳ, ಎಂ.ಎಫ್. ದೋಣಿ, ರಾಜಶೇಖರ ಕರಡಿ, ಕೆ.ಜಿ. ವ್ಯಾಪಾರಿ, ಶಿವಾನಂದ ಭಜಂತ್ರಿ, ಜಿ.ಎಸ್. ನಂದಿಕೋಲಮಠ, ಅಶೋಕ ಸತ್ಯರಡ್ಡಿ, ಸತೀಶ ಚನ್ನಪ್ಪಗೌಡರ, ಶರಣಯ್ಯ ಹಿರಮಠ, ಎಸ್.ಬಿ. ಅಕ್ಕಿ, ಷಡಕ್ಷರಿ ಮೆಣಸಿನಕಾಯಿ ಮುಂತಾದವರು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಯೋಗ ಸ್ಪರ್ಧೆಯ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಆಯುಷ್ ಇಲಾಖೆ ಮತ್ತು ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಗದಗ ಇವರ ಸಂಯುಕ್ತಾಶ್ರಯದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ 'ಯೋಗ ಅನ್‌ಪ್ಲಗ್ಡ್' ಕಾರ್ಯಕ್ರಮದ ಅಂಗವಾಗಿ ನಡೆಸಿದ ಗದಗ ಜಿಲ್ಲಾ ಮಟ್ಟದ ವಿವಿಧ ಯೋಗ ಸ್ಪರ್ಧೆಗಳ ಫಲಿತಾಂಶ ಈ ಕೆಳಗಿನಂತಿದೆ.

**1) ಯೋಗಾಸನ ಸ್ಪರ್ಧೆ** (ಪ್ರಾಥಮಿಕ ಶಾಲಾ ಮಕ್ಕಳಿಗೆ) ಬಾಲಕರ ವಿಭಾಗ: ಪ್ರಥಮ-ವೆಂಕಟೇಶ ಹಾಲಣ್ಣವರ, ದ್ವಿತೀಯ-ಅನಂತ ಕುರಲಗೇರಿ, ತೃತೀಯ-ಸುಶ್ರುತ ಗುಡಗೂರ.

ಬಾಲಕಿಯರ ವಿಭಾಗ: ಪ್ರಥಮ-ಗೌರಿ ನೀಲಗುಂದ, ದ್ವಿತೀಯ-ಶ್ವೇತಾ ಹಾಲಣ್ಣವರ, ತೃತೀಯ-ಅಮೂಲ್ಯ ಹವಳೆ

**2) ಯೋಗ ಪರಿಣತಿ ಸ್ಪರ್ಧೆ** (ಪ್ರೌಢಶಾಲಾ ವಿದ್ಯಾರ್ಥಿಗಳಿಗೆ) ಪ್ರಥಮ-ಶ್ರಾವಣಿ ಎಸ್.ಗುಡಗೂರ, ದ್ವಿತೀಯ-ನಿವೇದಿತಾ ಆರ್. ಹೊಸಮಠ, ತೃತೀಯ-ಗೋವರ್ಧನ ಎಸ್.ಬಡಿಗೇರ.

**3) ಯೋಗ ನಿಬಂಧ ಸ್ಪರ್ಧೆ** (ಕಾಲೇಜು ವಿದ್ಯಾರ್ಥಿಗಳಿಗೆ) ಪ್ರಥಮ-ಶಫೀ ಎಸ್.ನದಾಫ್, ದ್ವಿತೀಯ-ರೂಪಾ ಎಸ್.ಮಲಕಶೆಟ್ಟಿ.

ನಿರ್ಣಾಯಕರಾಗಿ ಚೇತನ ಚುಂಚಾ, ಎಸ್.ಎಂ. ಬುರಡಿ, ಜಯಶ್ರೀ ಡಾವಣಗೇರಿ, ಮಂಜುಳಾ ಬುಳ್ಳಾ, ಕಾರ್ಯ ನಿರ್ವಹಿಸಿದ್ದರು. ವಿಜೇತ ಸ್ಪರ್ಧಿಗಳಿಗೆ ಜೂನ್ 21ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪತ್ರ ಮತ್ತು ಮೆಡಲ್‌ಗಳನ್ನು ವಿತರಿಸಲಾಗುವುದು.

ಭಾಗವಹಿಸಿದ ಮತ್ತು ವಿಜೇತರಾದ ಸ್ಪರ್ಧಿಗಳಿಗೆ, ನಿರ್ಣಾಯಕರಿಗೆ, ಸಹಕರಿಸಿದ ಮಹನೀಯರೆಲ್ಲರಿಗೂ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ ಸಮೋರೇಕರ ಮತ್ತು ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಹಾರ್ದಿಕ ಅಭಿನಂದನೆ ಸಲ್ಲಿಸಿದ್ದಾರೆ.

ಇಟ್ಟಿಗೆರೆಯ ದಡದಲ್ಲಿ ಜಲಚರಗಳ ಮಾರಣಹೋಮ | ಎಚ್ಚೆತ್ತ ತಾಲೂಕಾಡಳಿತ, ಪುರಸಭೆ

# ಸತ್ತುಬಿದ್ದ ಮೀನು, ತ್ಯಾಜ್ಯದ ಎತ್ತುವಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಇಟ್ಟಿಗೆರೆಯ ದಡದಲ್ಲಿ ಗುರುವಾರ ಸಾವಿರಾರು ಮೀನುಗಳು, ಜಲಚರಗಳ ಮಾರಣ ಹೋಮದಿಂದ ಕೆರೆ ಸುತ್ತಮುತ್ತಲಿನ ಇಡೀ ಪ್ರದೇಶ ಗಬ್ಬು ವಾಸನೆ ಬೀರುವ ಜತೆಗೆ ರೋಗಭೀತಿ ಹರಡುವ ವಾತಾವರಣ ನಿರ್ಮಾಣವಾಗಿತ್ತು. ಇದೀಗ ಎಚ್ಚೆತ್ತಿರುವ ತಾಲೂಕಾಡಳಿತ, ಪುರಸಭೆ ಶುಕ್ರವಾರ ಬೆಳ್ಳಂಬೆಳಿಗ್ಗೆಯೇ ಕೆರೆಯ ದಂಡೆಯ ಸುತ್ತಲೂ ಸತ್ತುಬಿದ್ದ ಮೀನು, ತ್ಯಾಜ್ಯ ಎತ್ತುವಳಿ ಮಾಡಿ ಸ್ವಚ್ಛಗೊಳಿಸುವ ಕಾರ್ಯ ಕೈಗೊಂಡರು.

ಏಕಾಏಕಿ ಇಷ್ಟೊಂದು ಪ್ರಮಾಣದಲ್ಲಿ ಸತ್ತ ಮೀನು ಎಲ್ಲಿಂದ ಬಂದವು ಎಂಬ ಪ್ರಶ್ನೆಗೆ ಉತ್ತರ ಹುಡುಕಲಾಗಿ, ಕಳೆದ 2/3 ವರ್ಷಗಳಿಂದ ತಾಲೂಕಿನ ಶೆಟ್ಟಿಕೇರಿ ಗ್ರಾಮದ ರುದ್ರಪ್ಪ ಲಮಾಣಿ ಈ ಕೆರೆಯಲ್ಲಿ ಮೀನು ಸಾಕಾಣಿಕೆಗೆ ಅನುಮತಿ ಪಡೆದು ಮೀನು ಮರಿ



ಬಿಟ್ಟಿದ್ದರು. 2 ವರ್ಷದಿಂದ ಕೆರೆಗೆ ಪೂರ್ಣ ಪ್ರಮಾಣದಲ್ಲಿ ನೀರು ಬಂದಿಲ್ಲ. ಕೆರೆಗೆ ಚರಂಡಿ ನೀರಿನೊಂದಿಗೆ ಬಂದು ಸೇರುವ ಅಪಾರ ಪ್ರಮಾಣದ ತ್ಯಾಜ್ಯ, ಕೆಮಿಕಲ್ಸ್, ಬಯಲು ಶೌಚ ಮತ್ತು ವಿಷಯುಕ್ತ ನೀರಿನಿಂದ ಸಾವಿರಾರು ಮೀನು, ಜಲಚರಗಳು ಸಾವನ್ನಪ್ಪಿವೆ ಎಂಬ ಮಾತುಗಳು ಕೇಳಿ ಬರುತ್ತಿವೆ.

ತಹಸೀಲ್ದಾರ ವಾಸುದೇವ ಸ್ವಾಮಿ, ಮುಖ್ಯಾಧಿಕಾರಿ ಮಹೇಶ ಹೆಚ್, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪೌರ ಕಾರ್ಮಿಕರಿಂದ ಸತ್ತ ಮೀನು, ತ್ಯಾಜ್ಯ ಎತ್ತುವಳಿ ಮಾಡಿಸಿದರು. ಆದರೆ, ಗಬ್ಬು ವಾಸನೆ ಬೀರುತ್ತಿದ್ದ ಸತ್ತ ಮೀನುಗಳ ಎತ್ತುವಳಿಗೆ ಪೌರ ಕಾರ್ಮಿಕರು ಪರದಾಡಿದ್ದು ಮಾತ್ರ ಪ್ರಶ್ನಾರ್ಹವೇ ಆಗಿತ್ತು.

ಕೆರೆಯಲ್ಲಿ ಮೀನುಗಳ ಮಾರಣ ಹೋಮದ ಸುದ್ದಿ ತಿಳಿಯುತ್ತಿದ್ದಂತೆ ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ವಿನಾಯಕ ಬೇವಿನಹಳ್ಳಿ ಶುಕ್ರವಾರ ಪಟ್ಟಣದ ಇಟ್ಟಿಗೆರೆಗೆ ಭೇಟಿ ನೀಡಿ, ಕೆರೆಗೆ ಹೆಚ್ಚಿನ ಪ್ರಮಾಣದಲ್ಲಿ ಕಲುಷಿತ ನೀರು ಸೇರಿ ಆಮ್ಲಜನಕದ ಪ್ರಮಾಣ ಕಡಿಮೆಯಾಗಿ ಉಸಿರಾಟದ ತೊಂದರೆಯಿಂದ ಮೀನುಗಳು ಸತ್ತಿವೆ. ಕೆರೆಯ ಸುತ್ತಲಿನ ಪ್ರದೇಶ ಮತ್ತು ನೀರನ್ನು ಸ್ವಚ್ಛಗೊಳಿಸುವದರೊಂದಿಗೆ ಚರಂಡಿ ನೀರು ಸೇರದಂತೆ ಕ್ರಮ ಕೈಗೊಳ್ಳಬೇಕು.

ನೀರಿನ ಶುದ್ಧತೆಗೆ ಸುಣ್ಣವನ್ನು ನೀರಿನಲ್ಲಿ ಮಿಶ್ರಣ ಮಾಡಿ ಕೆರೆಯ ಸುತ್ತಲೂ ಸಿಂಪಡಿಸಬೇಕು, ಪೋಟ್ಯಾಸಿಯಂ ಪರ್ಮಾಂಗನೇಟ್ (ಕೆಎಂಎನ್‌ಓ) ನಿಗದಿತ ಪ್ರಮಾಣದಲ್ಲಿ ನೀರಿನಲ್ಲಿ ಸಿಂಪಡಣೆ ಮಾಡುವುದರಿಂದ ಮೀನುಗಳ ಉಸಿರಾಟಕ್ಕೆ ಸಹಾಯವಾಗುತ್ತದೆ ಎಂದು ಸಲಹೆ ನೀಡಿದರು.

> ಇಟ್ಟಕೆರೆ ದಂಡೆಯಲ್ಲಿ ಸತ್ತ ಮೀನುಗಳನ್ನು ಪೌರ ಕಾರ್ಮಿಕರಿಂದ ಎತ್ತುವಳಿ ಮಾಡಿಸಿ ಘನತಾಜ್ಯ ಘಟಕದ ಜಾಗೆಯಲ್ಲಿ ಆಳವಾಗಿ ಹೂಳಲಾಗುವುದು. ಕೆರೆಗೆ ಬರುವ ಕಲುಷಿತ ತಡೆಯಲು ತಾತ್ಕಾಲಿಕ ಕ್ರಮ ಕೈಗೊಳ್ಳಲಾಗಿದ್ದರೂ ಇತ್ತೀಚೆಗೆ ಸುರಿದ ದೊಡ್ಡ ಮಳೆಗೆ ಚರಂಡಿ ನೀರು ಹರಿದು ಬಂದಿದೆ. ಕೆರೆಯ ಸುತ್ತ ವಾಸನೆ ಬರದಂತೆ ಬ್ಲೀಚಿಂಗ್ ಪೌಡರ್ ಹಾಕಿ ಕೆರೆಯಂಚಿನ ಸ್ವಚ್ಛತೆಗೆ ಆದ್ಯತೆ ನೀಡಲಾಗುವದು. ಈಗಾಗಲೇ ಕೆರೆ ಅಭಿವೃದ್ಧಿ ಕಾರ್ಯಕ್ಕೆ ಟೆಂಡರ್ ಪ್ರಕ್ರಿಯೆ ಕೊನೆಯ ಹಂತದಲ್ಲಿದೆ. ಕೆರೆಯನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ.
>
> **- ಮಂಜುನಾಥ ಮುದಗಲ್.**
> ಹಿರಿಯ ಅರೋಗ್ಯ ನಿರೀಕ್ಷಕರು, ಪುರಸಭೆ.



ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾಹಿತಿ

# ಯುವನಿಧಿ ಯೋಜನೆಯ ನೋಂದಣಿ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕೈಗಾರಿಕೆ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ ವತಿಯಿಂದ 2025ರ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಅರ್ಹ ವಿದ್ಯಾರ್ಥಿಗಳು, ನಿರುದ್ಯೋಗಿಗಳು https://sevasindhugs.karnataka.gov.in ಸೇವಾಸಿಂಧು ವೆಬ್ ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಗದಗ ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, 2024-25ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡಿ 2025ರಲ್ಲಿ ಸ್ನಾತಕೋತ್ತರ ಪದವಿ, ಪದವಿ ಹಾಗೂ ಡಿಪ್ಲೋಮಾ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಕಳೆದ 6 ತಿಂಗಳುಗಳ ಕಾಲ ಸರಕಾರಿ, ಖಾಸಗಿ ಹಾಗೂ ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವ್ಯಾಸಂಗವನ್ನು ಮುಂದುವರಿಸದೇ ಇದ್ದವರು ಮತ್ತು ಕನಿಷ್ಠ 6 ವರ್ಷಗಳ ಕಾಲ ಕರ್ನಾಟಕದ ರಹವಾಸಿಯಾಗಿರುವವರು ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ಪಡೆಯಬಹುದಾಗಿದೆ.

ಯುವನಿಧಿ ಯೋಜನೆಯಡಿ ಪದವೀಧರರಿಗೆ ಪ್ರತಿ ತಿಂಗಳು 3,000 ರೂ ಹಾಗೂ ಡಿಪ್ಲೋಮಾ ಉತ್ತೀರ್ಣರಾದವರಿಗೆ 1,500 ರೂ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ. ಫಲಿತಾಂಶದ ನಂತರ ಹೆಸರನ್ನು ನೋಂದಾಯಿಸಿಕೊಂಡ ಅಭ್ಯರ್ಥಿಗಳು ನಿರುದ್ಯೋಗಿಗಳಾಗಿ 180 ದಿನಗಳನ್ನು ಪೂರೈಸಿ ನಂತರವೂ ನಿರುದ್ಯೋಗಿಗಳಾಗಿದ್ದಲ್ಲಿ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.

ಪ್ರತಿ ತಿಂಗಳು ಯುವನಿಧಿ ಯೋಜನೆಯ ಪ್ರಯೋಜನ ಪಡೆಯಬೇಕಿದ್ದರೆ, ಸೇವಾಸಿಂಧು ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ತಾನು ನಿರುದ್ಯೋಗಿ ಎಂದು, ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿ ಅಲ್ಲವೆಂದು ಪ್ರತಿ ತ್ರೈಮಾಸಿಕ 1ರಿಂದ 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿದೆ. ಯುವನಿಧಿ ಫಲಾನುಭವಿಗಳು ಉಚಿತ ಕೌಶಲ್ಯ ತರಬೇತಿ ಪಡೆಯಲು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವೆಬ್‌ಸೈಟ್‌ಗೆ ಭೇಟಿ ನೀಡಿ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ. ಜೊತೆಗೆ ಜಿಟಿಟಿಸಿ, ಕೆಜಿಟಿಟಿಐ, ಸಿಡಾಕ್, ಮೋಕ್ಷಗುಂಡಂ ಹಾಗೂ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಮೂಲಕ ಸಿಎಂಕೆಕೆವೈ ಯೋಜನೆಯಡಿ ಉಚಿತ ಕೌಶಲ್ಯ ತರಬೇತಿ ಪಡೆಯಬುದಾಗಿದೆ ಎಂದು ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಅಭ್ಯರ್ಥಿಗಳು ಕರ್ನಾಟಕ ಒನ್/ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಯೋಜನೆಗೆ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ಸಂಖ್ಯೆ ಹೊಂದಿರಬೇಕು. ಅರ್ಜಿ ಸಲ್ಲಿಸಿದ ನಂತರ ಪೋರ್ಟಲ್‌ನಲ್ಲಿ ತಮ್ಮ ಅರ್ಜಿ ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಳ್ಳಬಹುದು. ಜೊತೆಗೆ ಸಹಾಯವಾಣಿ ಸಂಖ್ಯೆ 1800-599-7154 ಸಂಪರ್ಕಿಸಬಹುದಾಗಿದೆ.

# ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಭಾಗದ ಪಾಲಕರು ತಮ್ಮ ಮಕ್ಕಳಿಗೆ ಅಕ್ಷರ ಜ್ಞಾನ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಅಕ್ಷರ ಜ್ಞಾನದಿಂದ ಕುಟುಂಬಗಳ ಪ್ರಗತಿ ಸಾಧ್ಯ ಎಂದು ರಾಜ್ಯ ಯುವ ಕಾಂಗ್ರೆಸ್ ಘಟಕದ ಕಾರ್ಯದರ್ಶಿ ಅಕ್ಷಯ ಪಾಟೀಲ ಹೇಳಿದರು.

ಅವರು ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಜನ್ಮ ದಿನಾಚರಣೆ ನಿಮಿತ್ತ ಅಬ್ಬಿಗೇರಿ ಗ್ರಾಮದ ಸರಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟ್‌ಬುಕ್ ವಿತರಿಸಿ ಮಾತನಾಡಿದರು.

ಶಹರ ಸೇರಿದಂತೆ ಗ್ರಾಮೀಣ ಭಾಗಗಳ ಮಕ್ಕಳು ಗುಣಮಟ್ಟದ ಶಿಕ್ಷಣ ಹೊಂದಬೇಕು ಎಂಬ ಮಹತ್ವದ ಉದ್ದೇಶದಿಂದ ಸರಕಾರಗಳು ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸಿ ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ನೀಡಿವೆ. ಪಾಲಕರು ಸಹ ತಮ್ಮ ಮಕ್ಕಳ



ಉಜ್ವಲ ಭವಿಷ್ಯಕ್ಕಾಗಿ ಶಿಕ್ಷಣ ಒದಗಿಸುವಲ್ಲಿ ಪ್ರಾಮಾಣಿಕತೆಯನ್ನು ಮೆರೆಯಬೇಕು ಎಂದರು.

ಸರಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳಿಗೆ 1500 ನೋಟ್‌ಬುಕ್ ವಿತರಿಸಲಾಗಿತ್ತಿದೆ. ಮುಂದಿನ ದಿನಗಳಲ್ಲಿ ರೋಣ ಮತ್ತು ಗಜೇಂದ್ರಗಡ ತಾಲೂಕಿನ ಎಲ್ಲ ಸರಕಾರಿ ಶಾಲೆಗಳ ಮಕ್ಕಳಿಗೆ ಉಚಿತವಾಗಿ ನೋಟ್‌ಬುಕ್ ವಿತರಣೆಗೆ ಈಗಾಗಲೇ ಚಿಂತಿಸಲಾಗಿದೆ. ಅಬ್ಬಿಗೇರಿ ಸೇರಿದಂತೆ ಈಗ ನಾಲ್ಕು ಗ್ರಾಮಗಳ ಸರಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟ್‌ಬುಕ್ ವಿತರಿಸಲಾಗುತ್ತಿದೆ. ಮಕ್ಕಳು ಸಹ ಶಿಕ್ಷಕರ ಪ್ರೀತಿಯನ್ನು ಸಂಪಾದಿಸುವ ಜೊತೆಗೆ ಒಳ್ಳೆಯ ವಿದ್ಯಾರ್ಥಿಗಳಾಗಿ ಮುಂದೆ ಬರಬೇಕು ಎಂದರು.

ಸೋಮು ನಾಗರಾಜ, ಮಹೇಶ ಕಳಸಣ್ಣವರ, ಮುತ್ತುರಾಜ ನವಲಗುಂದ ಸೇರಿದಂತೆ ಅಬ್ಬಿಗೇರಿ ಗ್ರಾಮದ ಕಾಂಗ್ರೆಸ್ ಮುಖಂಡರು, ಗ್ರಾ.ಪಂ ಸದಸ್ಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು ಉಪಸ್ಥಿತರಿದ್ದರು.

# ನೂತನ ಮಸ್ಜೀದ ಕಟ್ಟಡದ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಕುರಡಗಿ ಗ್ರಾಮದಲ್ಲಿ ನೂತನ ನಫೀಸಾ ಕೌಸರ ಮಸ್ಜೀದ ಕಟ್ಟಡದ ಉದ್ಘಾಟನಾ ಕಾರ್ಯಕ್ರಮ, ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಜೂನ್ 22ರಂದು ಜರುಗಲಿವೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರು ವಹಿಸಿಕೊಳ್ಳುವರು.

ಸಾನ್ನಿಧ್ಯವನ್ನು ಮೌಲಾನ ಶಬ್ಬೀರಅಹ್ಮದ ನದ್ವಿ (ಕಲ್ಮನಿ) ವಹಿಸಲಿದ್ದು, ಸಾಮೂಹಿಕ ವಿವಾಹಗಳ ಉದ್ಘಾಟನೆಯನ್ನು ಸಚಿವ ಹೆಚ್.ಕೆ. ಪಾಟೀಲ ನೆರವೇರಿಸುವರು. ಮಸ್ಜೀದಿ ಕಟ್ಟಡದ ಉದ್ಘಾಟನೆಯನ್ನು ವಸತಿ ಮತ್ತು ವಕ್ಫ್ ಸಚಿವ ಬಿ.ಝಡ್. ಜಮೀರಅಹ್ಮದ ಖಾನ್ ನೆರವೇರಿಸುವರು. ಕಾರ್ಯಕ್ರಮದ ನೇತೃತ್ವವನ್ನು ಮಾಜಿ ಸಚಿವ ಬಿ.ಆರ್. ಯಾವಗಲ್ಲ, ಅಧ್ಯಕ್ಷತೆಯನ್ನು ಕುರುಡಗಿ ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಜನಾಬ ಹೆಚ್. ಹೆಚ್. ಗೋಗೇರಿ ವಹಿಸಿಕೊಳ್ಳುವರು.

ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಸಲೀಮ್ ಅಹ್ಮದ, ರೋಣ ಶಾಸಕ ಜಿ.ಎಸ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿಗ್ಗಾಂವ ಶಾಸಕ ಯಾಸೀರಖಾನ ಪಠಾಣ, ಹೆಸ್ಕಾಂ ಅಧ್ಯಕ್ಷ ಸಯ್ಯದ ಅಜೀಂಪೀರ ಖಾದ್ರಿ, ಕೆ.ಎಸ್. ಆರ್.ಟಿ.ಸಿ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳ, ಎಸ್.ಕೆ. ನದಾಫ್, ಹಜರತಅಲಿ ದೊಡ್ಡಮನಿ, ಮೌಲಾಸಾಬ ಬೆಂಡಿಗೇರಿ, ನದಾಫ್ ಸಂಘದ ಜಿಲ್ಲಾಧ್ಯಕ್ಷ ಕೆ.ಎಫ್. ಹಳ್ಳಾಳ, ಪೀರಸಾಬ ನದಾಫ್, ರಮಜಾನಸಾಬ ನದಾಫ್, ವಿವೇಕ ಯಾವಗಲ್ಲ, ಪ್ರವೀಣ ಯಾವಗಲ್ಲ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ನಾನಂತೂ ಕೆಪಿಸಿಸಿ ಅಧ್ಯಕ್ಷ ಆಕಾಂಕ್ಷಿ, ಹೈಕಮಾಂಡ್ ನಿರ್ಧಾರಕ್ಕೆ ಕಾಯಬೇಕು ಅಷ್ಟೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ನಾನಂತೂ ಕೆಪಿಸಿಸಿ ಅಧ್ಯಕ್ಷ ಆಕಾಂಕ್ಷಿ ಇದ್ದೇನೆ. ಹೈಕಮಾಂಡ್ ನಿರ್ಧಾರಕ್ಕೆ ಕಾಯಬೇಕು ಅಷ್ಟೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಯಾವಾಗ ಮಾಡುತ್ತಾರೆ ಕಾದು ನೋಡಬೇಕು. ನಾನು ಯಾವುದೇ ಒತ್ತಡ ಹಾಕುವುದಿಲ್ಲ ಎಂದು ಹೇಳಿದರು. ಇನ್ನೂ ರಾಜೀವ್ ಗಾಂಧಿ ವಸತಿ ಯೋಜನೆಯ ಹಗರಣದ ಕುರಿತು ಶಾಸಕ ಬಿ. ಆರ್. ಪಾಟೀಲ್ ಆಡಿಯೋ ವೈರಲ್ ವಿಚಾರ ಮಾತನಾಡಿ, ಶಾಸಕರ ಹೇಳಿಕೆಯನ್ನು ತನಿಖೆ ಮಾಡಿಸಬೇಕು, ಮೊದಲು ತನಿಖೆ ಆಗಬೇಕು, ಆಮೇಲೆ ವಿಚಾರ ಮಾಡೋಣ. ತನಿಖೆಯಿಂದ ಸತ್ಯಾಂಶ ಹೊರ ಬರುತ್ತೆ. ನಾನಾಗಿ ಯಾವುದೇ ತನಿಖೆಗೆ ಒತ್ತಾಯ ಮಾಡಲ್ಲ. ಇಲಾಖೆ ತಾನಾಗಿಯೇ ತನಿಖೆ ನಡೆಸಲಿ. ಅದು ಅವರ ಕರ್ತವ್ಯ ಎಂದು ಹೇಳಿದರು.

# ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧರಾಗಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿದ್ಯಾರ್ಥಿ ಜೀವನದಲ್ಲಿ ಪದವಿ ಹಂತವು ಅತ್ಯಮೂಲ್ಯವಾಗಿದ್ದು, ಈ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಲು ಈಗಿನಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸಿದ್ಧತೆ ನಡೆಸಿಕೊಳ್ಳಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಶ್ರೀ ಜ.ಫ.ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2024-2025ನೇ ಸಾಲಿನ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ ಹಾಗೂ ಅಂತಿಮ ವರ್ಷದ ಬಿಎ ಮತ್ತು ಬಿಕಾಂ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾಲೇಜಿನ ಅವಧಿಯಲ್ಲಿ ಶೈಕ್ಷಣಿಕವಾಗಿ ಪ್ರಗತಿ ಸಾಧಿಸುವುದಕ್ಕೆ ಪರೀಕ್ಷೆಗಳಲ್ಲಿ ಹೆಚ್ಚು ಅಂಕಗಳನ್ನು ಗಳಿಸುವುದರ ಜೊತೆ-ಗೆ ಉತ್ತಮ ಸಂಸ್ಕಾರವನ್ನು ಹೊಂದುವುದು ಅವಶ್ಯವಿದೆ. ಈ ಹಂತದಲ್ಲಿ ಯಾವುದೇ ದುಶ್ಚಟಗಳಿಗೆ ಬಲಿಯಾಗದೇ ನಿಮ್ಮ ತಂದೆ-ತಾಯಿ ಮತ್ತು ಗುರುವಿಗೆ ಕೀರ್ತಿ ತರುವಂತವರಾಗಿ ಹೊರಹೊಮ್ಮಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಡಾ. ಉಮೇಶ ಅರಹುಣಸಿ, ಬಿಇಓ ಎಚ್.ಎನ್. ನಾಯ್ಕ, ಪ್ರೊ. ಪ್ರಕಾಶ ಹೊಸಮನಿ, ಡಾ. ಎಲ್.ಟಿ. ನಾಯಕ, ಕೆ.ಎ. ಬಳಿಗೇರ, ಎಚ್.ಎಂ. ದೇವಗಿರಿ, ಸಿ.ಸಿ. ನೂರಶೆಟ್ಟರ, ಫಕ್ಕೀರೇಶ ರಟ್ಟಿಹಳ್ಳಿ, ಸಂದೀಪ ಕಪ್ಪತ್ತನವರ,



ಅಶೋಕ ವರವಿ, ನಂದಾ ಪಲ್ಲೇದ, ನಂದಾ ಕಪ್ಪತ್ತನವರ, ಮಂಜುನಾಥ ಸೊಂಟನೂರ ಮುಂತಾದವರು ಉಪಸ್ಥಿತರಿದ್ದರು.

ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಉದ್ಘಾಟನೆ, ಲಿಂಗ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಿರಿ ಬಂದಾಗ ದೇವರು, ಧರ್ಮವನ್ನು ಮರೆಯದಿರಿ

■ ವಿಜಯಸಾಕ್ಷಿ ಸುದ್ದಿ, ಜತ್

ಮನುಷ್ಯನಿಗೆ ಬರುವ ಸಿರಿ-ಸಂಪತ್ತು ಶಾಶ್ವತವಲ್ಲ. ಆಧ್ಯಾತ್ಮ ಜ್ಞಾನವೊಂದೇ ನಿಜವಾದ ಸಂಪತ್ತು. ಸಿರಿ ಬಂದಾಗ ದೇವರು ಮತ್ತು ಧರ್ಮವನ್ನು ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಸುಸಲಾದಿ ಗ್ರಾಮದಲ್ಲಿ ನಿರ್ಮಿಸಿದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಉದ್ಘಾಟನೆ, ಲಿಂಗ ಪ್ರತಿಷ್ಠಾಪನೆ ಮತ್ತು ಕಳಸಾರೋಹಣದ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವರು ಕೊಟ್ಟ ಕೊಡುಗೆ ಬೇರಾರೂ ಕೊಡಲು ಸಾಧ್ಯವಿಲ್ಲ. ನಿಂತ ನೆಲ, ಕುಡಿಯುವ ನೀರು, ಬೀಸುವ ಗಾಳಿ ದೇವರು ಕೊಟ್ಟ ಅಮೂಲ್ಯ ವರ. ಉದಾತ್ತ ಮಾನವ ಜೀವನದಲ್ಲಿ ಒಂದಿಷ್ಟಾದರೂ



ಶಿವಜ್ಞಾನ ಸಂಪಾದಿಸಿಕೊಳ್ಳದಿದ್ದರೆ ಮತ್ತು ಗುರು ಕಾರುಣ್ಯ ಪಡೆಯದೇ ಹೋದರೆ ಜೀವನ ವ್ಯರ್ಥವಾಗುತ್ತದೆ. ದೇವರ ಮೇಲಿನ ನಂಬಿಗೆ ಮತ್ತು ವಿಶ್ವಾಸವನ್ನು ಎಂದಿಗೂ ಕಳೆದುಕೊಳ್ಳಬಾರದು. ಜೀವನದ ವಿಕಾಸಕ್ಕೆ ತಂದ ನೀತಿ-ನಿಯತ್ತುಗಳ ಪರಿಪಾಲನೆಯೇ ನಿಜವಾದ ಧರ್ಮ.

ಮಾನವ ಜೀವನದ ಶ್ರೇಯಸ್ಸಿಗಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ದಶವಿಧ ಸೂತ್ರಗಳನ್ನು ಬೋಧಿಸಿದ್ದಾರೆ. ಶರಣರು ಸಪ್ತ ಸೂತ್ರಗಳನ್ನು ಹೇಳಿದ್ದಾರೆ. ದೇವರು ಮತ್ತು ಧರ್ಮವನ್ನು ತೋರಿಸುವಾತನೇ ನಿಜವಾದ ಗುರು. ಪರಶಿವನ ಸಾಕಾರ ಇನ್ನೊಂದು ರೂಪವೇ ಗುರು. ಅಜ್ಞಾನ ಕಳೆದು ಜ್ಞಾನ ಜ್ಯೋತಿ ಬೆಳಗಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಸುಂದರವಾಗಿ ಕಟ್ಟಿ ಇಂದು ಉದ್ಘಾಟನೆ ಲಿಂಗ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಧರ್ಮ ದೀಪೋತ್ಸವ ಸಂಯೋಜಿಸಿರುವುದು ತಮಗೆ ಅತ್ಯಂತ ಸಂತೋಷವನ್ನು ಉಂಟುಮಾಡಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಜಯ ಮತ್ತು ಚನ್ನಪ್ಪ ಮಾತನಾಡಿ, ವೀರಶೈವ ಧರ್ಮ ಮತ್ತು ಗುರು ಪರಂಪರೆ ಎಂದಿಗೂ ಮರೆಯಬಾರದೆಂದರು. ತಡವಲಗಾ ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಜಗಜೀವಣಿ ಮುಪ್ಪಿನಾರ್ಯ ಶಿವಾಚಾರ್ಯರು, ಹಾಗೂ ಗುಡ್ಡಾಪುರದ ಗುರಪಾದೇಶ್ವರ ಶಿವಾಚಾರ್ಯರು ಉಪಸ್ಥಿತರಿದ್ದರು. ಶಾಸಕ ಗೋಪಿಚಂದ ಪಡೋಳಕರ, ಡಾ. ರವೀಂದ್ರ ಅರಳಿ, ಎಮ್.ಆರ್. ಪಾಟೀಲ, ಚನ್ನಪ್ಪಾ ಹೊರ್ತಿಕರ, ಉಮದಿ ಬಸವರಾಜ ಹಿರೇಮಠ ಅವರನ್ನು ಮೊದಲ್ಗೊಂಡು ಹಲವಾರು ಗಣ್ಯರು ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

ಸಮಾರಂಭದ ಹಿಂದಿನ ದಿನ ಸಂಜೆ ಸುಸಲಾದಿ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಸಂಭ್ರಮದ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತ ಸಮುದಾಯದ ಮಧ್ಯೆ ವಿಜೃಂಭಣೆಯಿಂದ ಜರುಗಿತು. ದೇವಸ್ಥಾನ ಉದ್ಘಾಟನೆ ನಿಮಿತ್ತ 5 ದಿನಗಳ ಕಾಲ ಜೇರಟಗಿಯ ವೇ. ಮಡಿವಾಳೇಶ್ವರ ಶಾಸ್ತ್ರಿಗಳಿಂದ ಆಧ್ಯಾತ್ಮಿಕ ಪ್ರವಚನ ಜರುಗಿತು.

> ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ, ಮನುಷ್ಯ ಯಂತ್ರದಂತೆ ದುಡಿದರೂ ಮನಸ್ಸಿಗೆ ಶಾಂತಿಯಿಲ್ಲ. ಬೆಳೆಯುವ ಮಕ್ಕಳಿಗೆ ಭೌತಿಕ ಶಿಕ್ಷಣದ ಜೊತೆ-ಗೆ ಸಂಸ್ಕಾರ ಕೊಡುವ ಕೆಲಸ ಮಾಡಬೇಕಾಗಿದೆ. ಸುಸಲಾದಿ ಗ್ರಾಮದ ಬಹು ದಿನಗಳ ಸಂಕಲ್ಪ ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನದೊಂದಿಗೆ ಪೂರ್ಣಗೊಂಡಿದೆ.
>
> ಆಗಾಗ ಇಂಥ ಧರ್ಮ ಕಾರ್ಯಗಳು ನಡೆದುಕೊಂಡು ಬರಬೇಕೆಂದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ-(69)/2025-26/634 ದಿನಾಂಕ: 20.06.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀಮತಿ ಸಾವಿತ್ರಿ ಕೋಂ ಕೆ.ರಮಾಕಾಂತ, ಶ್ರೀ ಶಂಕರ ಕೃಷ್ಣದಿಕ್ಷಿತ ಪುರಾಣಿಕ, ಶ್ರೀಮತಿ ಉಮಾ ಕೋಂ ಗಂಗಾಧರ ಪುರಾಣಿಕ, ಶ್ರೀಮತಿ ಶರ್ವಾಣಿ ಕೋಂ ಮಂಗಲೇಶ ಜೋಶಿ, ಶ್ರೀ ಶಿವಾನಂದ ಗಂಗಾಧರ ಪುರಾಣಿಕರವರ ಪೈಕಿ ಒಟ್ಟು ಮೊಕ್ತಿದಾರರಾದ, ಶ್ರೀಯುತ ಮಂಜುನಾಥ ತಂದೆ ಅಂದಾನಪ್ಪ ಚಂದಪ್ಪನವರ ಸಾ॥ ಗದಗ ಇವರು ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69(3) ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ಗದಗ ಗದಗ | 882/*/4 | 02ಎಕರೆ-04ಗುಂಟೆ-08ಆಣೆ | ಉದ್ಯಾನವನ/ ಬಯಲು ಜಾಗೆ | ವಸತಿ |
| 2 | | 882/*/ 1+2/3 | 02ಎಕರೆ-05ಗುಂಟೆ-08ಆಣೆ | | |
| 3 | | 882/*/3 | 04ಎಕರೆ-10ಗುಂಟೆ | | |
| | ಒಟ್ಟು ಕ್ಷೇತ್ರ | | 08ಎಕರೆ-20ಗುಂಟೆ | | |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/116/ದೇಶಪಾಂಡೆಪಬ್ಲಿಸಿಟಿ/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka